PRGI : KNKAN/26/A0629 ವಿಜಯನಗರ-ಬಳ್ಳಾರಿ-ಕೊಪ್ಪಳ-ರಾಯಚೂರು-ಗದಗ-ಯಾದಗಿರಿ-ದಾವಣಗೆರೆ-ಹಾವೇರಿ-ಕಲಬುರ್ಗಿ- ಜಿಲ್ಲೆಗಳಲ್ಲಿ ಪ್ರಸಾರಿತ

NO.PMG/KA/NK/BLY/04/2026-2028

# ಹೊಸಪೇಟೆ ಧ್ವನಿ

HOSAPETE DHWANI

Kannada Daily morning news paper

ಸ್ವಾಸ್ಥ್ಯ ಸಮಾಜಕ್ಕಾಗಿ ನಮ್ಮ ಧ್ವನಿ

ಸಂಪಾದಕರು ಕೆ.ಪ್ರಕಾಶ ಕಾಕುಬಾಳು

Editor : K. prakash Kakubalu ಮೊ. 9342568684 VIJAYANAGARA ಕನ್ನಡ ದಿನ ಪತ್ರಿಕೆ

ಸಂಪುಟ : 01 ಸಂಚಿಕೆ : 192 ಶನಿವಾರ ದಿನಾಂಕ : 17-10-2026 ಪುಟ-4 ಬೆಲೆ : 2 ರೂ. E mail: hosapetedhwani32026@gmail.com

Volume 01 Issue : 192 Saturday Date: 17-10-2026 Page-4 Rs : 2 ರೂ. E mail: hosapetedhwani32026@gmail.com

ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಪರಿಹರಿಸುವಲ್ಲಿ ರಾಜ್ಯ ಸರ್ಕಾರವೂ ಜವಾಬ್ದಾರಿ ವಹಿಸಿ, ರೈತರ ಬೆಂಬಲಕ್ಕೆ ನಿಲ್ಲಬೇಕು ಕಬ್ಬಿನ ಬೆಲೆ ಪರಿಷ್ಕರಣೆ ಸೇರಿದಂತೆ ರೈತರ ಬೇಡಿಕೆಗಳ ಈಡೇರಿಕೆಗೆ ರಾಜ್ಯ ಸರ್ಕಾರವೂ ಸಹಕರಿಸಬೇಕು.

–ಬಸವರಾಜ ಬೊಮ್ಮಾಯಿ
ಬಿಜೆಪಿ ಸಂಸದ



## ಕರ್ನಾಟಕದ ನೂತನ ರಾಜ್ಯಪಾಲರಾಗಿ ಸುಧಾ ಯಾದವ್ ಪ್ರಮಾಣವಚನ ಸ್ವೀಕಾರ



**ಹೊಸಪೇಟೆ ಧ್ವನಿ ನ್ಯೂಸ್ :**
**ಬೆಂಗಳೂರು:** ಕರ್ನಾಟಕದ ನೂತನ ರಾಜ್ಯಪಾಲರಾಗಿ ಸುಧಾ ಯಾದವ್ ಅವರು ಇಂದು ಶುಕ್ರವಾರ ಬೆಂಗಳೂರಿನ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅವರು ನೂತನ ರಾಜ್ಯಪಾಲರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

# ನ.1ರಂದು ಅದ್ದೂರಿ ಕನ್ನಡ ರಾಜ್ಯೋತ್ಸವ ಆಚರಣೆ

## ಕನ್ನಡ ರಾಜ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆಯಲ್ಲಿ ಕವಿತಾ ಎಸ್. ಮನ್ನಿಕೇರಿ



**ಹೊಸಪೇಟೆ ಧ್ವನಿ ನ್ಯೂಸ್ :**
**ವಿಜಯನಗರ (ಹೊಸಪೇಟೆ):** ಕನ್ನಡ ರಾಜ್ಯೋತ್ಸವವನ್ನು ನವೆಂಬರ್ 1ರಂದು ಜಿಲ್ಲೆಯಲ್ಲಿ ವಿಜೃಂಭಣೆಯಿಂದ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ಕನ್ನಡಾಭಿಮಾನಿಗಳು, ಸಾರ್ವಜನಿಕರು ಸೇರಿದಂತೆ ಎಲ್ಲರೂ ಪಾಲ್ಗೊಂಡು ಕನ್ನಡ ಹಬ್ಬವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಕನ್ನಡ ರಾಜ್ಯೋತ್ಸವ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನವೆಂಬರ್ 1ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 9 ಗಂಟೆಗೆ ಧ್ವಜಾರೋಹಣ ನೆರವೇರಿಸಲಾಗುವುದು. ಬಳಿಕ ತುಕಡಿ ಪರೇಡ್ ಹಾಗೂ ವಿವಿಧ ಸಾಂಸ್ಕೃತಿಕ ನೃತ್ಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಬೇಕಾದ ಅಗತ್ಯ ಸಿದ್ಧತೆ ಕೈಗೊಳ್ಳಬೇಕು. ಅಲ್ಲದೇ ಅಂದು ಜಿಲ್ಲೆಯ ಎಲ್ಲ ಸರ್ಕಾರಿ ಕಚೇರಿಗಳಲ್ಲಿಯೂ ಕನ್ನಡ ರಾಜ್ಯೋತ್ಸವದ ಅಂಗವಾಗಿ ಧ್ವಜಾರೋಹಣ ನೆರವೇರಿಸಬೇಕು. ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಜನಪ್ರತಿನಿಧಿಗಳು ಹಾಗೂ ಗಣ್ಯರನ್ನು ಆಹ್ವಾನಿಸಬೇಕು ಎಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ಯಾವುದೇ ಅವಘಡಗಳು ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು. ಅಗತ್ಯವಿರುವ ಆಂಬುಲೆನ್ಸ್ ಹಾಗೂ ಆರೋಗ್ಯ ಸಿಬ್ಬಂದಿಯನ್ನು ನಿಯೋಜಿಸಬೇಕು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಗುರುತಿಸಿ ಸನ್ಮಾನಿಸಲಾಗುಹುದು.

**ಶೇ.60 ಕನ್ನಡ ಬಳಕೆ ಕಡ್ಡಾಯಗೊಳಿಸಲು ಮನವಿ** ಸಭೆಯಲ್ಲಿ ಕನ್ನಡಪರ ವಿಷಯವಾಗಿ ಪ್ರಸ್ತಾಪಿಸಿದ ಮುಖಂಡರು, ಅನಂತಶಯನಗುಡಿ ಮೇಲ್ಸೇತುವೆಗೆ ಶ್ರೀಕೃಷ್ಣದೇವರಾಯರ ಹೆಸರಿಡಬೇಕು ಹಾಗೂ ಶ್ರೀಕೃಷ್ಣದೇವರಾಯ ವೃತ್ತದಲ್ಲಿ ತಾಯಿ ಭುವನೇಶ್ವರಿ ದೇವಿಯ ವೃತ್ತ ನಿರ್ಮಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲೆಯ ಕೆಲವು ಸಂಸ್ಥೆಗಳಲ್ಲಿ ಇಂದಿಗೂ ಶೇ.60ರಷ್ಟು ಕಡ್ಡಾಯ ಕನ್ನಡ ಬಳಕೆಯಾಗುತ್ತಿಲ್ಲ. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ದೀಪಾಲಂಕಾರ ಹಾಗೂ ಕನ್ನಡ ಧ್ವಜ ಮತ್ತು ತೋರಣಗಳನ್ನು ಅಳವಡಿಸಿ ಕನ್ನಡ ರಾಜ್ಯೋತ್ಸವದ ಸಂಭ್ರಮ ಹೆಚ್ಚಿಸಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಕನ್ನಡ ಬಳಕೆ ಸೇರಿದಂತೆ ಪ್ರಸ್ತಾಪಿಸಿದ ವಿಷಯಗಳನ್ನು ಪರಿಶೀಲಿಸಿ ಕಾನೂನು ಬದ್ಧವಾಗಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಾಹ್ನವಿ, ಅರಣ್ಯ ಇಲಾಖೆಯ ಉಪ ಸಂರಕ್ಷಣಾಧಿಕಾರಿ ಅನುಪಮ, ಅಪರ ಜಿಲ್ಲಾಧಿಕಾರಿ ಪಿ.ಎನ್. ಲೋಕೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಶಿಗ್ಗಾವಿ: ಅಹಿಂದ ನಾಯಕರ ಘನತೆಗೆ ಧಕ್ಕೆ ತರುವ ಪ್ರಯತ್ನ ಸಹಿಸಲ್ಲ–ಸಿಖಂದರ್ ದಾದುನವರ ಖಂಡನೆ

**ಹೊಸಪೇಟೆ ಧ್ವನಿ ನ್ಯೂಸ್ :**
**ಶಿಗ್ಗಾವಿ:** ಅಹಿಂದ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ



ಸಿದ್ಧರಾಮಯ್ಯ ಅವರ ಕುರಿತು ನಡೆದಿದೆ ಎನ್ನಲಾದ ಸ್ಟ್ರಿಂಗ್ ಆಪರೇಷನ್ ವಿಚಾರಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಅಹಿಂದ ಸಂಘಟನೆಯ ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಸಿಖಂದರ್ ದಾದುನವರ ತೀವ್ರ ಖಂಡನೆ ವ್ಯಕ್ತಪಡಿಸಿದ್ದಾರೆ.

ಪಟ್ಟಣದಲ್ಲಿ ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಂತಹ ಬೆಳವಣಿಗೆಗಳು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಧಕ್ಕೆ ತರುತ್ತವೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರಾಜಕೀಯ ಭಿನ್ನಾಭಿಪ್ರಾಯ ಏನೇ ಇರಲಿ, ವ್ಯಕ್ತಿತ್ವಕ್ಕೆ ಮಸಿ ಬಳಿಯುವ ಪ್ರಯತ್ನ ಬೇಡ. ಸಾರ್ವಜನಿಕ ಜೀವನದ ನಾಯಕರ ಕುರಿತು ಆರೋಪ ಬಂದಾಗ ಸತ್ಯಾಸತ್ಯತೆ ಪರಿಶೀಲಿಸದೆ ತೀರ್ಮಾನಕ್ಕೆ ಬರುವುದು ಸರಿಯಲ್ಲ. ಟೀಕೆ, ವಿಮರ್ಶೆಗೆ ಅವಕಾಶವಿದೆ, ಆದರೆ ರಾಜಕೀಯ ಉದ್ದೇಶದಿಂದ ಗೌರವಕ್ಕೆ ಧಕ್ಕೆ ತರುವ ಪ್ರಯತ್ನ ಖಂಡನೀಯ ಎಂದರು. ಅಹಿಂದ ಸಮುದಾಯದ ಆಶೋತ್ತರಗಳಿಗೆ ಸ್ಪಂದಿಸುವ ನಾಯಕರ ವಿರುದ್ಧದ ಆರೋಪಗಳ ಸತ್ಯಾಂಶ ಸಾರ್ವಜನಿಕವಾಗಿ ಹೊರಬರಬೇಕು, ಪಾರದರ್ಶಕತೆ ಇರಬೇಕು, ವದಂತಿ ಆಧಾರದಲ್ಲಿ ಗೌರವಕ್ಕೆ ಧಕ್ಕೆ ತರುವುದು ಸರಿಯಲ್ಲ ಎಂದು ಅವರು ಹೇಳಿದ್ದಾರೆ.

# ಸ್ಮಾರಕಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉಳಿಸುವುದು ಯುವಕರ ಆದ್ಯ ಕರ್ತವ್ಯ

## ಕನ್ನಡ ವಿಶ್ವವಿದ್ಯಾಲಯದ ಹಿರಿಯ ಸಹಾಯಕ ಪ್ರಾಧ್ಯಾಪಕ ಡಾ.ಗೋವಿಂದ



**ಹೊಸಪೇಟೆ ಧ್ವನಿ ನ್ಯೂಸ್ :**
**ಹೊಸಪೇಟೆ:** ಸ್ಮಾರಕಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉಳಿಸಬೇಕಾದುದು ಪ್ರತಿಯೊಬ್ಬ ಯುವಕರ ಆದ್ಯ ಕರ್ತವ್ಯ ಎಂದು ಕನ್ನಡ ವಿಶ್ವವಿದ್ಯಾಲಯದ ಹಿರಿಯ ಸಹಾಯಕ ಪ್ರಾಧ್ಯಾಪಕ ಡಾ.ಗೋವಿಂದ ಹೇಳಿದರು.

ನಗರದ ಶ್ರೀ ಶಂಕರ್ ಆನಂದ್ ಸಿಂಗ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಕರ್ನಾಟಕ ಸರ್ಕಾರ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಪುರಾತತ್ವ ಇಲಾಖೆ ಮೈಸೂರು ಮತ್ತು ಇತಿಹಾಸ ವಿಭಾಗದ ಸಹಯೋಗದಲ್ಲಿ ಪರಂಪರಾ ಕೂಟ ಉದ್ಘಾಟಿಸಿ ಮಾತನಾಡಿದ ಅವರು, ತಲಾ ತಲಾಂತರದಿಂದ ರೂಢಿಸಿಕೊಂಡು ಬರುವ ಆಚಾರ–ವಿಚಾರಗಳೇ ಪರಂಪರೆ. ಯುವಕರು ವೈಜ್ಞಾನಿಕ ದೃಷ್ಟಿಕೋನ ಬೆಳೆಸಿಕೊಳ್ಳಬೇಕು, ಸ್ಮಾರಕಗಳ ಮಹತ್ವ ತಿಳಿಯಬೇಕು ಎಂದರು.

ಮುಖ್ಯ ಅತಿಥಿ ಹೂವಿನ ಹಡಗಲಿ ಜಿಪಿ ಕಾಲೇಜು ಉಪನ್ಯಾಸಕ ಶಂಕರ್ ಜಿ. ಮಾಳೆಕೊಪ್ಪ ಅವರು ತಮ್ಮ ನಾಣ್ಯ ಸಂಗ್ರಹ ಪ್ರದರ್ಶಿಸಿ, ಊರಿನ ಹೊಲ, ದೇಗುಲಗಳ ಬಳಿ ಇರುವ ಶಾಸನ, ವೀರಗಲ್ಲುಗಳನ್ನು ಸಂರಕ್ಷಿಸಿ ತಜ್ಞರಿಗೆ ತೋರಿಸಿ ಇತಿಹಾಸ ತಿಳಿಯಬೇಕು ಎಂದರು.

ಕನ್ನಡ ವಿಭಾಗ ಮುಖ್ಯಸ್ಥ ಡಾ.ಸಿ.ದೇವಣ್ಣ ಮಾತನಾಡಿ, ಚರಿತ್ರೆ ಮತ್ತು ಕನ್ನಡ ಸಾಹಿತ್ಯ ಅವಿನಾಭಾವ ಸಂಬಂಧ ಹೊಂದಿದೆ ಎಂದರು.

ಇತಿಹಾಸ ವಿಭಾಗ ಮುಖ್ಯಸ್ಥೆ ಡಾ. ವಾಣಿಶ್ರೀ ಪ್ರಾಸ್ತಾವಿಕವಾಗಿ ಮಾತನಾಡಿ, ಮುಂದಿನ ದಿನಗಳಲ್ಲಿ ಸ್ಮಾರಕಗಳಿಗೆ ಭೇಟಿ, ವಿಚಾರ ಸಂಕಿರಣ, ಸ್ಪರ್ಧೆ ಹಮ್ಮಿಕೊಳ್ಳುವುದಾಗಿ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಭಾರ ಪ್ರಾಂಶುಪಾಲ ಟಿ.ಎಚ್.ಎಂ.ದಾರುಕಸ್ವಾಮಿ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಇತಿಹಾಸದ ಪ್ರಶ್ನೆಗಳು ಹೆಚ್ಚು ಬರುತ್ತವೆ, ಸ್ಥಳೀಯ ಚರಿತ್ರೆ ತಿಳಿಯುವುದು ಮುಖ್ಯ ಎಂದು ಹೇಳಿದರು.

ಈ ವೇಳೆ ಸ್ಮಾರಕಗಳ ಬಿತ್ತಿಚಿತ್ರ ಪ್ರದರ್ಶನ ಮತ್ತು ಇತಿಹಾಸ ಉಪನ್ಯಾಸಕ ಕೃಷ್ಣಮೂರ್ತಿ ಬರೆದ ಸ್ಪರ್ಧಾತ್ಮಕ ಮಾರ್ಗದರ್ಶಿ ಪುಸ್ತಕ ಬಿಡುಗಡೆ ಮಾಡಲಾಯಿತು. ಇತಿಹಾಸ ಉಪನ್ಯಾಸಕರಾದ ಡಾ.ಗುರುರಾಜ್, ಗಿರಿಯಪ್ಪ ಜೆ, ಡಾ.ಅಕ್ತರಖಾನಂ, ಕೃಷ್ಣಮೂರ್ತಿ ಟಿ, ಬೋರಯ್ಯ ಟಿ ಇದ್ದರು.

## ಹರಪನಹಳ್ಳಿ: ನಗರ ಸಾರಿಗೆ ಬಸ್ ಸೌಲಭ್ಯಕ್ಕೆ ಆಗ್ರಹಿಸಿ ಐಸಾ ಅನಿರ್ದಿಷ್ಟಾವಧಿ ಧರಣಿ



**ಹೊಸಪೇಟೆ ಧ್ವನಿ ನ್ಯೂಸ್ :**
**ಹರಪನಹಳ್ಳಿ:** ಸಮರ್ಪಕ ಸಾರಿಗೆ ಸೌಲಭ್ಯವಿಲ್ಲದೆ ವಿದ್ಯಾರ್ಥಿಗಳು, ಮಹಿಳೆಯರು, ವೃದ್ಧರು, ರೋಗಿಗಳು ಮತ್ತು ನಗರ ನಿವಾಸಿಗಳು ಪರದಾಡುತ್ತಿದ್ದು, ನಗರ ಸಾರಿಗೆ ಬಸ್ ಸೌಲಭ್ಯ ನೀಡಬೇಕು ಎಂದು ಐಸಾ ಸಂಘಟನೆ ರಾಜ್ಯ ಸಮಿತಿ ಸಂಚಾಲಕ ಗುಳೇದಹಟ್ಟಿ ಸಂತೋಷ ಆಗ್ರಹಿಸಿದರು.

ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಗುರುವಾರ ಐಸಾ ವತಿಯಿಂದ ಅನಿರ್ದಿಷ್ಟಾವಧಿ ಧರಣಿ ನಡೆಸಿ ಅವರು ಮಾತನಾಡಿದರು. ಗ್ರಾಮೀಣ ಪ್ರದೇಶದಿಂದ ನಿತ್ಯ ನೂರಾರು ಜನ ವ್ಯಾಸಂಗ, ಉದ್ಯೋಗ, ವ್ಯಾಪಾರ, ಚಿಕಿತ್ಸೆಗೆ ನಗರಕ್ಕೆ ಬರುತ್ತಾರೆ. ಆದರೆ ತಾಲೂಕಿನ ಗ್ರಾಮೀಣ ಪ್ರದೇಶಗಳಿಂದ ನಗರಕ್ಕೆ ಹಾಗೂ ನಗರದಿಂದ ಗ್ರಾಮಗಳಿಗೆ ನಿಗದಿತ ಸಮಯಕ್ಕೆ ಬಸ್ ಸಂಚಾರ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ವಿದ್ಯಾರ್ಥಿಗಳು, ಉದ್ಯೋಗಿಗಳು, ರೋಗಿಗಳು ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ ಬೆಳಿಗ್ಗೆ ಮತ್ತು ಸಂಜೆ ಹೆಚ್ಚುವರಿ

ಪುಟ– 3

## ಹಗರಿಬೊಮ್ಮನಹಳ್ಳಿ: ನಾಮಫಲಕದಲ್ಲಿ ಶೇ.60 ಕನ್ನಡ ಕಡ್ಡಾಯಕ್ಕೆ ಆಗ್ರಹ – ಪುರಸಭೆಗೆ ಮನವಿ

**ಹೊಸಪೇಟೆ ಧ್ವನಿ ನ್ಯೂಸ್ :**
**ಹಗರಿಬೊಮ್ಮನಹಳ್ಳಿ :** ಕನ್ನಡ ನಾಡಿನಲ್ಲಿ ಕನ್ನಡಕ್ಕೆ ಅಗ್ರಸ್ಥಾನ ನೀಡಬೇಕು, ಕನ್ನಡಿಗರ ನೆಲದಲ್ಲಿ ಕನ್ನಡವೇ ಪ್ರಧಾನವಾಗಿ ಕಾಣಿಸಬೇಕು ಎಂದು ಒತ್ತಾಯಿಸಿ ಕನ್ನಡಪರ ಹೋರಾಟಗಾರರು ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸರ್ಕಾರದ ನಿಯಮಾನುಸಾರ ಪಟ್ಟಣ ವ್ಯಾಪ್ತಿಯ ಸಣ್ಣ–ಪುಟ್ಟ ಅಂಗಡಿ, ಹೋಟೆಲ್, ಬೃಹತ್ ವಾಣಿಜ್ಯ ಮಳಿಗೆ, ಖಾಸಗಿ ಶಿಕ್ಷಣ ಸಂಸ್ಥೆ, ಆಸ್ಪತ್ರೆಗಳ ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಕಡ್ಡಾಯವಾಗಿ ಅಳವಡಿಸಬೇಕು ಎಂದು ನಿಯೋಗ ಆಗ್ರಹಿಸಿತು.



ಕನ್ನಡ ಕೇವಲ ಸಂವಹನ ಮಾಧ್ಯಮವಲ್ಲ, ನಾಡಿನ ಅಸ್ಮಿತೆ, ಸಂಸ್ಕೃತಿ ಮತ್ತು ಸ್ವಾಭಿಮಾನದ ಪ್ರತೀಕ. ನಿಯಮದಂತೆ ನಾಮಫಲಕದಲ್ಲಿ ಶೇ.60 ಕನ್ನಡ, ಉಳಿದ ಶೇ.40 ಇತರೆ ಭಾಷೆಗೆ ಅವಕಾಶವಿದೆ. ಹಲವೆಡೆ ಕನ್ನಡವನ್ನು ಕಡೆಗಣಿಸಲಾಗುತ್ತಿದ್ದು, ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಪ್ರತಿಪಾದಿಸಲಾಯಿತು.

ಸರ್ಕಾರದ ಆದೇಶ ಕಾಗದಕ್ಕೆ ಸೀಮಿತವಾಗದೆ ನೆಲಮಟ್ಟದಲ್ಲಿ ಜಾರಿಯಾಗಬೇಕು. ಪುರಸಭೆ ಅಧಿಕಾರಿಗಳು ಅಂಗಡಿಗಳ ಪರಿಶೀಲನೆ ನಡೆಸಿ ನಿಯಮ ಉಲ್ಲಂಘಿಸುವವರ ವಿರುದ್ಧ ಕ್ರಮ ಜರುಗಿಸಬೇಕು, ವ್ಯಾಪಾರಸ್ಥರಲ್ಲಿ ಭಾಷಾ ಜಾಗೃತಿ ಮೂಡಿಸಬೇಕು ಎಂದು ಒತ್ತಾಯಿಸಲಾಯಿತು.

ಮನವಿ ಸಂದರ್ಭದಲ್ಲಿ ಕಸಾಪ ಸದಸ್ಯ, ಚಿತ್ರಕಲಾವಿದ ಕೊಟ್ರೇಶ್ ತಳವಾರ, ಕನ್ನಡ ಜಾಗೃತಿ ಸಮಿತಿ ಸದಸ್ಯ ಉಮೇಶ್ ಪಾಳೆಗಾರ್, ಸಮಾಜ ಸೇವಕ ಸೋಮಶೇಖರ್ ಒಬಳಾಪುರ, ಮಾಜಿ ತಾಪಂ ಸದಸ್ಯ ಬಿ. ದೇವೇಂದ್ರಪ್ಪ, ವರದಿಗಾರ ನಾಗರಾಜ್ ಕಲ್ಲಹಳ್ಳಿ ಸೇರಿದಂತೆ ಕನ್ನಡಾಭಿಮಾನಿಗಳು ಇದ್ದರು.

## ಕೃಷಿ ಪಂಪ್‌ಸೆಟ್‌ಗಳಿಗೆ 7 ಗಂಟೆ ಗುಣಮಟ್ಟದ ವಿದ್ಯುತ್ ಪೂರೈಸಲು ಹಲಗಿ ಸುರೇಶ ಒತ್ತಾಯ

**ಹೊಸಪೇಟೆ ಧ್ವನಿ ನ್ಯೂಸ್ :**
**ಹೂವಿನಹಡಗಲಿ :** ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ ಏಳು ಗಂಟೆಗಳ ಗುಣಮಟ್ಟದ ತ್ರಿಫೇಸ್ ವಿದ್ಯುತ್ ಪೂರೈಸಬೇಕು ಹಾಗೂ ರೈತರ ವಿದ್ಯುತ್ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ, ಅಖಿಲ ಭಾರತ ಕಿಸಾನ್ ಸಭಾ ಹಾಗೂ ಪ್ರಗತಿಪರ ಸಂಘಟನೆಗಳ ಮುಖಂಡರು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ರೈತ ಸಂಘದ ತಾಲೂಕು ಅಧ್ಯಕ್ಷ ಸಿದ್ದಪ್ಪ ದೊಡ್ಡಮನಿ ಮಾತನಾಡಿ, ಹೂವಿನಹಡಗಿ ತಾಲೂಕಿನಲ್ಲಿ ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕವಾಗಿ ವಿದ್ಯುತ್ ಪೂರೈಕೆಯಾಗದೆ ರೈತರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.



ವಿದ್ಯುತ್ ವ್ಯತ್ಯಯ ಹಾಗೂ ಅಸಮರ್ಪಕ ಪೂರೈಕೆಯಿಂದ ಬೆಳೆಗಳಿಗೆ ನೀರುಣಿಸಲು ಸಾಧ್ಯವಾಗದೆ ರೈತರು ಆರ್ಥಿಕ ನಷ್ಟದ ಆತಂಕ ಎದುರಿಸುತ್ತಿದ್ದಾರೆ ಎಂದರು.

ಹಗರಿಬೊಮ್ಮನಹಳ್ಳಿ ತಾಲೂಕು ರೈತ ಸಂಘದ ಅಧ್ಯಕ್ಷ ಬಸವನಗೌಡ ಮಾತನಾಡಿ, ರೈತರ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಜೆಸ್ಕಾಂ ಅಧಿಕಾರಿಗಳಿಗೆ ಮನವಿ

ಪುಟ– 3

## ಮದಕರಿ ನಾಯಕ ಈ ನಾಡಿನ ಹೆಮ್ಮೆಯ ಪ್ರತೀಕ : ಶಾಸಕ ಡಾ. ಶ್ರೀನಿವಾಸ್



**ಹೊಸಪೇಟೆ ಧ್ವನಿ ನ್ಯೂಸ್ :**
**ಕೂಡ್ಲಿಗಿ :** ರಾಜಾ ವೀರ ಮದಕರಿ ನಾಯಕರು ಈ ನಾಡಿನ ಹೆಮ್ಮೆಯ ಇತಿಹಾಸ ಮತ್ತು ಸ್ವಾಭಿಮಾನದ ಪ್ರತೀಕವಾಗಿದ್ದು, ಅವರ ಶೌರ್ಯ, ಧೈರ್ಯ ಹಾಗೂ ಆಡಳಿತದ ಆದರ್ಶಗಳು ಇಂದಿನ ಪೀಳಿಗೆಗೆ ಸದಾ ಪ್ರೇರಣೆಯಾಗಿದೆ ಎಂದು ಶಾಸಕ ಡಾ.ಎನ್.ಟಿ. ಶ್ರೀನಿವಾಸ್ ಅಭಿಪ್ರಾಯಪಟ್ಟರು.

ಅವರು ತಾಲ್ಲೂಕಿನ ಕಾನಾ ಹೊಸಹಳ್ಳಿಯ ಮದಕರಿ ವೃತ್ತದಲ್ಲಿ ರಾಜಾ ವೀರ ಮದಕರಿ ನಾಯಕ ಜಯಂತಿ ಅಂಗವಾಗಿ ಮದಕರಿ ನಾಯಕನ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದರು. ರಾಜ್ಯದ 72 ಪಾಳೇಗಾರರಲ್ಲಿ ಚಿತ್ರದುರ್ಗ ಸಂಸ್ಥಾನವನ್ನು ಸಮರ್ಥವಾಗಿ ಆಳಿದ ಕೀರ್ತಿ ರಾಜಾ ವೀರ ಮದಕರಿ ನಾಯಕನಿಗೆ ಸಲ್ಲುತ್ತದೆ ಎಂದರು. ಮದಕರಿ ನಾಯಕರ ಸಾಹಸಗಾಥೆ ಹಾಗೂ ನಾಡಿಗೆ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಿದ ಅವರು, ಇತಿಹಾಸದ ಮಹನೀಯರ ಆದರ್ಶಗಳನ್ನು ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಂ. ಓ. ಸಿದ್ದಲಿಂಗಪ್ಪ, ಮಂಜುನಾಥ್ ಸ್ವಾಮಿ, ಬೋರಣ್ಣ, ತಳವಾರ ಶರಣಪ್ಪ, ಡಾ. ಓಂಕಾರಪ್ಪ, ಹುಲಿಕೇರಿ ಮಾರಪ್ಪ, ಕಲ್ಲಳ್ಳಿ ವೆಂಕಟೇಶ್, ಅಡಿವೆಜ್ಜರ್ ನಾಗೇಶ್, ಸಕಲಾಪುರದಹಟ್ಟಿ ಹರೀಶ್, ಯಂಬಳಿ ಮಂಜುನಾಥ್, ವೆಂಕಟೇಶ್, ನಟರಾಜ್, ಕಾನಾಮಡುಗು ಸೋಮಶೇಖರಪ್ಪ, ಸಿದ್ದಪ್ಪ, ಪ್ರಕಾಶ್, ಮಲ್ಲಿಕಾರ್ಜುನ ಸೇರಿದಂತೆ ಇತರೆ ಸಮುದಾಯದ ಗಣ್ಯರು ಹಾಗೂ ಮುಖಂಡರು ಹಾಜರಿದ್ದರು.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಪರ ಮತಯಾಚನೆ

### ಬಳ್ಳಾರಿಯ ವಿವಿಧ ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರ ಬೆಂಬಲ ಕೋರಿದ ಕಾಂಗ್ರೆಸ್ ನಾಯಕರು



**ಹೊಸಪೇಟೆ ಧ್ವನಿ ನ್ಯೂಸ್ :**
**ಬಳ್ಳಾರಿ :** ಕರ್ನಾಟಕ ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರ ಪರವಾಗಿ ಬಳ್ಳಾರಿ ನಗರದ ವಿವಿಧ ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರಲ್ಲಿ ಮತಯಾಚಿಸಲಾಯಿತು.

ವಿಧಾನ ಪರಿಷತ್ ಸದಸ್ಯ ಚಂದ್ರಶೇಖರ್ ಪಾಟೀಲ್ ಸೇರಿದಂತೆ ಕಾಂಗ್ರೆಸ್ ಮುಖಂಡರು ನಗರದ ಬಿ.ಐ.ಟಿ.ಎಂ. ಕಾಲೇಜು, ವಿ.ಎಸ್.ಕೆ. ವಿಶ್ವವಿದ್ಯಾಲಯ ಕಾಲೇಜು, ಬಿ.ಪಿ.ಎಸ್.ಸಿ. ಕಾಲೇಜು, ರೈಮೇಕ್ ಕಾಲೇಜು ಹಾಗೂ ಬೆಸ್ಟ್ ಕಾಲೇಜುಗಳಿಗೆ ಭೇಟಿ ನೀಡಿ ಶಿಕ್ಷಕರನ್ನು ಭೇಟಿಯಾದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರನ್ನು ಬೆಂಬಲಿಸಿ ಮತ ಚಲಾಯಿಸುವಂತೆ ಶಿಕ್ಷಕರಲ್ಲಿ ಮನವಿ ಮಾಡಲಾಯಿತು. ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸುವ ಮೂಲಕ ಶಿಕ್ಷಕರ ಪರವಾದ ಧ್ವನಿಗೆ ಬಲ ತುಂಬಬೇಕು ಎಂದು ಮುಖಂಡರು ಕೋರಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಚಂದ್ರಶೇಖರ್ ಪಾಟೀಲ್, ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಲ್ಲಂ ಪ್ರಶಾಂತ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಆಂಜಿನೇಯಲು, ಜಿಲ್ಲಾ ಶಿಕ್ಷಕರ ಘಟಕದ ಅಧ್ಯಕ್ಷರು, ಬಳ್ಳಾರಿ ಜಿಲ್ಲಾ ವೀಕ್ಷಕರಾದ ಅಖಿಲ್ ಅಹಮ್ಮದ್, ಮಾನಯ್ಯ, ಸತೀಶ್ ಖಾಂಡ್ರ, ಶೋಭಾ ಕಾಳಿಂಗ ಸೇರಿದಂತೆ ಇತರ ಮುಖಂಡರು ಉಪಸ್ಥಿತರಿದ್ದರು.

## ಐತಿಹಾಸಿಕ ಶ್ರೀರಂಗಪಟ್ಟಣ ದಸರಾ ಮಹೋತ್ಸವಕ್ಕೆ ಅದ್ದೂರಿ ಚಾಲನೆ

# ಕ್ಯಾಪ್ಟನ್ ಧನಂಜಯನ ಮೇಲಿದ್ದ ತಾಯಿ ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಮಾಡಿದ ಕ್ರೇಜಿಸ್ಟಾರ್ ರವಿಚಂದ್ರನ್



**ಶ್ರೀರಂಗಪಟ್ಟಣ (ಮಂಡ್ಯ):** ಐತಿಹಾಸಿಕ 416ನೇ ಶ್ರೀರಂಗಪಟ್ಟಣ ದಸರಾ ಮಹೋತ್ಸವಕ್ಕೆ ಸ್ಯಾಂಡಲ್‌ವುಡ್‌ನ ಕ್ರೇಜಿಸ್ಟಾರ್ ವಿ.ರವಿಚಂದ್ರನ್ ಅವರು ಅದ್ದೂರಿ ಚಾಲನೆ ನೀಡಿದ್ದಾರೆ.

2026ರ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕಿರಂಗೂರು ಬಳಿ ಇರುವ ಬನ್ನಿಮಂಟಪದಲ್ಲಿ ನಡೆದ ಸಮಾರಂಭದಲ್ಲಿ, ರವಿಚಂದ್ರನ್ ಅವರು ಕ್ಯಾಪ್ಟನ್ ಧನಂಜಯ ಆನೆಯ ಮೇಲಿದ್ದ ತಾಯಿ ಚಾಮುಂಡೇಶ್ವರಿ ದೇವಿಯ ವಿಗ್ರಹಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಜಂಬೂಸವಾರಿಗೆ ವಿದ್ಯುಕ್ತವಾಗಿ ಚಾಲನೆ ನೀಡಿದರು.

ಶ್ರೀರಂಗಪಟ್ಟಣ ತಾಲೂಕಿನ ಕಿರಂಗೂರು ಗ್ರಾಮದ ಬಳಿ ಇರುವ ಬನ್ನಿಮಂಟಪದಲ್ಲಿ ಶುಭ ಕುಂಭ ಲಗ್ನದಲ್ಲಿ, ಬನ್ನಿಮಂಟಪದಲ್ಲಿ ಪೂಜೆ ಮುಗಿದ ಬಳಿಕ ಧನಂಜಯ ಆನೆಯು ಚಿನ್ನದ ಅಂಬಾರಿಯಲ್ಲಿ ತಾಯಿ ಚಾಮುಂಡೇಶ್ವರಿಯ ಮೂರ್ತಿಯನ್ನು ಹೊತ್ತು ಗಾಂಭೀರ್ಯದಿಂದ ಹೆಜ್ಜೆ ಹಾಕಿತು. ಇದು ಶ್ರೀರಂಗಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಸಾಗಿತು. ಈ ವೇಳೆ, ದಸರಾ ಮೆರವಣಿಗೆಯಲ್ಲಿ 50ಕ್ಕೂ ಹೆಚ್ಚು ಜನಪದ ಕಲಾ ತಂಡಗಳು ಮತ್ತು ಸರ್ಕಾರದ ವಿವಿಧ ಇಲಾಖೆಗಳ ಸಾಧನೆಗಳನ್ನು ಬಿಂಬಿಸುವ 30ಕ್ಕೂ ಹೆಚ್ಚು ಆಕರ್ಷಕ ಸ್ತಬ್ಧಚಿತ್ರಗಳು ಪಾಲ್ಗೊಂಡು ಸಾರ್ವಜನಿಕರ ಗಮನ ಸೆಳೆದವು. ಇನ್ನು, ಈ ಉದ್ಘಾಟನಾ ಸಮಾರಂಭದಲ್ಲಿ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ, ಕೃಷಿ ಸಚಿವ ಪಿ.ಎಂ. ನರೇಂದ್ರಸ್ವಾಮಿ, ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ, ದರ್ಶನ್ ಪುಟ್ಟಣ್ಣಯ್ಯ ಮತ್ತು ಜಿಲ್ಲಾಧಿಕಾರಿ ಡಾ. ಕುಮಾರ ಸೇರಿದಂತೆ ಪ್ರಮುಖ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು.

ಅಕ್ಟೋಬರ್ 18ರವರೆಗೆ ಒಟ್ಟು ನಾಲ್ಕು ದಿನಗಳ ಕಾಲ ಶ್ರೀರಂಗಪಟ್ಟಣದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಶ್ರೀರಂಗನಾಥಸ್ವಾಮಿ ದೇವಾಲಯದ ಪ್ರಧಾನ ವೇದಿಕೆಯಲ್ಲಿ ಸಂಜೆ ಸಾಂಸ್ಕೃತಿಕ ವೇದಿಕೆಗೆ ಸಚಿವ ಚಲುವರಾಯಸ್ವಾಮಿ ಚಾಲನೆ ನೀಡಲಿದ್ದು, ರವಿಚಂದ್ರನ್ ಅವರ ತಂಡದ ವಿಶೇಷ ಪ್ರದರ್ಶನವೂ ಇರಲಿದೆ. ಅದರಲ್ಲೂ, ಮೈಸೂರು ದಸರಾದಷ್ಟೇ ಹಳೆಯ ಇತಿಹಾಸ ಹೊಂದಿರುವ ಶ್ರೀರಂಗಪಟ್ಟಣ ದಸರಾದಲ್ಲಿ ಈ ಬಾರಿ ವಿಜಯನಗರ ಸಾಮ್ರಾಜ್ಯ ಹಾಗೂ ಶ್ರೀರಂಗನಾಥಸ್ವಾಮಿ ದೇವಾಲಯದ 416 ವರ್ಷಗಳ ಪಾರಂಪರಿಕ ಲಾಂಛನವನ್ನು ಬಿಡುಗಡೆಗೊಳಿಸಲಾಗಿದೆ.

ಇದರ ಅಂಗವಾಗಿ ಕೃಷ್ಣರಾಜಸಾಗರ ಜಲಾಶಯದ ಬಳಿ ವಾರಣಾಸಿ ಮಾದರಿಯ ಕಾವೇರಿ ಆರತಿ ಕಾರ್ಯಕ್ರಮವನ್ನೂ ಆಯೋಜಿಸಲಾಗಿದೆ.

## ಸಕಲೇಶಪುರದಲ್ಲಿ ನೂರಾರು ವೋಟರ್ ಐಡಿ, ಆಧಾರ್ ಕಾರ್ಡ್‌ಗಳು ಬೆಂಕಿಗೆ ಆಹುತಿ: ಮತದಾರರ ಪಟ್ಟಿ ಪರಿಷ್ಕರಣೆ ಬೆನ್ನಲ್ಲೇ ಬೆಚ್ಚಿಬೀಳಿಸೋ ಘಟನೆ



**ಸಕಲೇಶಪುರ (ಹಾಸನ):** ಹಾಸನ ಜಿಲ್ಲೆಯ ಸಕಲೇಶಪುರ ಪಟ್ಟಣದಲ್ಲಿ ನೂರಾರು ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್ ಹಾಗೂ ಪಾನ್ ಕಾರ್ಡ್‌ಗಳನ್ನು ಅಪರಿಚಿತರು ಸುಟ್ಟು ಹಾಕಿರುವ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ. ಸಕಲೇಶಪುರದ ಶ್ರೀಗಂಧ ಹೋಟೆಲ್ ಸಮೀಪ ಈ ಅಧಿಕೃತ ದಾಖಲೆಗಳು ಸುಟ್ಟ ಹಾಗೂ ಅರೆಬರೆ ಸುಟ್ಟ ಸ್ಥಿತಿಯಲ್ಲಿ ಪತ್ತೆಯಾಗಿವೆ. ಅದರಲ್ಲೂ, ದೇಶಾದ್ಯಂತ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಚರ್ಚೆಗಳು ನಡೆಯುತ್ತಿರುವ ಬೆನ್ನಲ್ಲೇ ಈ ಘಟನೆ ಸಂಭವಿಸಿರುವುದು ತೀವ್ರ ಅನುಮಾನ ಹುಟ್ಟುಹಾಕಿದೆ.

ಪತ್ತೆಯಾಗಿರುವ ಗುರುತಿನ ಚೀಟಿಗಳು ಸಕಲೇಶಪುರ ತಾಲೂಕಿಗೆ ಸೇರಿದವುಗಳಲ್ಲ. ಬದಲಿಗೆ ಕರ್ನಾಟಕದ ಹಾಸನ, ರಾಮನಗರ, ಕೊಟ್ಟೂರು (ವಿಜಯನಗರ), ಬಳ್ಳಾರಿ, ವಿಜಯಪುರ, ಮೈಸೂರು, ಯಾದಗಿರಿ ಮತ್ತು ಮಂಡ್ಯ ಸೇರಿದಂತೆ ವಿವಿಧ ಜಿಲ್ಲೆಗಳ ಹಾಗೂ ನೆರೆಯ ಆಂಧ್ರಪ್ರದೇಶ ಮೂಲದ ವಿಳಾಸ ಹೊಂದಿರುವ, ಸರಿಸುಮಾರು 26ಕ್ಕೂ ಹೆಚ್ಚು ಮತದಾರರ ಗುರುತಿನ ಚೀಟಿಗಳು ಹಾಗೂ 30 ರಿಂದ 40 ಆಧಾರ್ ಮತ್ತು ಪಾನ್ ಕಾರ್ಡ್‌ಗಳು ಸ್ಥಳದಲ್ಲಿ ಪತ್ತೆಯಾಗಿವೆ.

ಇನ್ನು, ಘಟನೆ ತಿಳಿಯುತ್ತಿದ್ದಂತೆ ಸ್ಥಳೀಯ ನಿವಾಸಿಗಳು ಸಕಲೇಶಪುರ ನಗರ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸದ್ಯ ಪೊಲೀಸರು ದಾಖಲೆಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಇದರೊಂದಿಗೆ ಸಕಲೇಶಪುರ ಉಪವಿಭಾಧಿಕಾರಿಗಳು ಘಟನೆಯ ಕುರಿತು ಸಮಗ್ರ ತನಿಖೆಗೆ ಆದೇಶಿಸಿದ್ದಾರೆ. ಏತನ್ಮಧ್ಯೆ, ಪ್ರಾಥಮಿಕ ತನಿಖೆಯ ಮೇಲ್ನೋಟಕ್ಕೆ ಈ ಸುಡಲಾದ ದಾಖಲೆಗಳಿಗೂ ಮತ್ತು ಪ್ರಸ್ತುತ ನಡೆಯುತ್ತಿರುವ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಗೂ ಯಾವುದೇ ಸಂಬಂಧ ಕಂಡುಬಂದಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಒಟ್ಟಾರೆಯಾಗಿ, ಇಷ್ಟೊಂದು ದೊಡ್ಡ ಪ್ರಮಾಣದ ಸರ್ಕಾರಿ ಗುರುತಿನ ಚೀಟಿಗಳು ಬೇರೆ ಬೇರೆ ಕಡೆಯಿಂದ ಒಂದೇ ಸ್ಥಳಕ್ಕೆ ಹೇಗೆ ಬಂದವು ಮತ್ತು ಇದನ್ನು ಸುಟ್ಟ ದುಷ್ಕರ್ಮಿಗಳು ಯಾರು ಎಂಬುದು ತನಿಖೆಯಿಂದಷ್ಟೇ ಹೊರಬರಬೇಕಿದೆ.

## ಕಂದಕಕ್ಕೆ ಉರುಳಿ ಬಿದ್ದ ಖಾಸಗಿ ಬಸ್, ಇಬ್ಬರು ಸಾವು



**ಹುಬ್ಬಳ್ಳಿ:** ತಾಲ್ಲೂಕಿನ ಛಬ್ಬಿ ಕ್ರಾಸ್ ಬಳಿ ಖಾಸಗಿ ಬಸ್ಸೊಂದು ನಿಯಂತ್ರಣ ತಪ್ಪಿ ರಸ್ತೆ ಬದಿಯ ಕಂದಕಕ್ಕೆ ಉರುಳಿದ ಪರಿಣಾಮ ಇಬ್ಬರು ಮೃತಪಟ್ಟಿರುವ ಘಟನೆ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಈ ಬಸ್ ಮುಂಬೈನಿಂದ ಹುಬ್ಬಳ್ಳಿ ಮಾರ್ಗವಾಗಿ ಮುಂಜಾನೆ 4 ಗಂಟೆ ಸುಮಾರಿನಲ್ಲಿ ಬೆಂಗಳೂರಿಗೆ ಬರುತ್ತಿತ್ತು. ಬಸ್‌ನಲ್ಲಿ ಒಟ್ಟು 26 ಪ್ರಯಾಣಿಕರು ಇದ್ದರು. ಛಬ್ಬಿ ಕ್ರಾಸ್ ಬಳಿ ಬರುತ್ತಿದ್ದಂತೆ ಬಸ್ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯ ಕಂದಕಕ್ಕೆ ಉರುಳಿದ ಪರಿಣಾಮ ಇಬ್ಬರು ಮೃತಪಟ್ಟಿದ್ದು, ಚಾಲಕ ಸೇರಿದಂತೆ 15 ಮಂದಿ ಗಾಯಗೊಂಡಿದ್ದಾರೆ.

ಕಂದಕಕ್ಕೆ ಬಸ್ ಉರುಳಿದ ಸುದ್ದಿ ತಿಳಿಯುತ್ತಿದ್ದಂತೆ ಅಗ್ನಿಶಾಮಕದಳದ ಸಿಬ್ಬಂದಿ ಹಾಗೂ ಪೊಲೀಸರು ಸ್ಥಳಕ್ಕೆ ದಾವಿಸಿ ಗಾಯಾಳುಗಳನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಗಾಯಾಳುಗಳ ಪೈಕಿ ಮೂವರ ಸ್ಥಿತಿ ಗಂಭೀರವಾಗಿದೆ.

ಅಪಘಾತದಲ್ಲಿ ಮೃತಪಟ್ಟಿರುವ ಇಬ್ಬರ ಗುರುತು ಪತ್ತೆಯಾಗಿಲ್ಲ. ಅಪಘಾತಕ್ಕೆ ನಿಖರ ಕಾರಣವೇನು, ಬಸ್ ಚಾಲಕ ಏನಾದರೂ ನಿದ್ದೆ ಮಂಪರಿನಲ್ಲಿದ್ದರೇ, ಅಥವಾ ತಿರುವಿನಲ್ಲಿ ನಿಯಂತ್ರಣ ತಪ್ಪಿ ಕಂದಕಕ್ಕೆ ಬಸ್ ಉರುಳಿತೇ ಎಂಬ ಬಗ್ಗೆ ಗ್ರಾಮಾಂತರ ಠಾಣೆ ಪೊಲೀಸರು ಮಾಹಿತಿಗಳನ್ನು ಕಲೆಹಾಕುತ್ತಿದ್ದಾರೆ.

# ಡಾಲರ್ ಎದುರು ಚೇತರಿಸಿಕೊಂಡ ರೂಪಾಯಿ ಮೌಲ್ಯ




**ಮುಂಬೈ:** ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಕೈಗೊಂಡಿರುವ ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿನ ಮಧ್ಯಪ್ರವೇಶ ಹಾಗೂ ನಿಯಂತ್ರಣ ಕ್ರಮಗಳ ಪರಿಣಾಮವಾಗಿ ಇಂದು ಆರಂಭಿಕ ವಹಿವಾಟಿನಲ್ಲಿ ಅಮೆರಿಕದ ಡಾಲರ್ ಎದುರು ರೂಪಾಯಿ ಮೌಲ್ಯ 31 ಪೈಸೆ ಏರಿಕೆಯಾಗಿ 94.86ಕ್ಕೆ ತಲುಪಿದೆ.

ಕೇಂದ್ರ ಬ್ಯಾಂಕ್‌ನ ಮಧ್ಯಪ್ರವೇಶ ಮತ್ತು ಡಾಲರ್ ಖರೀದಿಗೆ ಸಂಬಂಧಿಸಿದ ದೀರ್ಘಾವಧಿಯ ವ'ಹಿವಾಟುಗ'ಳ'ನ'್ನ ಹಿಂಪಡೆಯುತ್ತಿರುವುದು ರೂಪಾಯಿ ಮೌಲ್ಯ ಏರಿಕೆಗೆ ಕಾರಣವಾಗಿದೆ ಎಂದು ಮಾರುಕಟ್ಟೆ ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಆದರೆ, ಜಾಗತಿಕ ಆರ್ಥಿಕ ಪರಿಸ್ಥಿತಿಯಲ್ಲಿನ ಸವಾಲುಗಳು ರೂಪಾಯಿ ಮತ್ತಷ್ಟು ಏರಿಕೆ ಕಾಣುವುದಕ್ಕೆ ಅಡ್ಡಿಯಾಗಬಹುದು ಎಂದು ಅವರು ಹೇಳಿದ್ದಾರೆ. ಅಂತರಬ್ಯಾಂಕ್ ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿ ರೂಪಾಯಿ 94.95ರಲ್ಲಿ ವಹಿವಾಟು ಆರಂಭಿಸಿತು. ಬಳಿಕ ಚೇತರಿಕೆ ಕಂಡು 94.86ಕ್ಕೆ ತಲುಪಿತು. ಇದು ಹಿಂದಿನ ದಿನದ ಮುಕ್ತಾಯದ ಮಟ್ಟಕ್ಕೆ ಹೋಲಿಸಿದರೆ 31 ಪೈಸೆಯ ಏರಿಕೆಯಾಗಿದೆ. ಬುಧವಾರ ಡಾಲರ್ ಎದುರು ರೂಪಾಯಿ 19 ಪೈಸೆ ಏರಿಕೆಯಾಗಿ 95.17ರಲ್ಲಿ ವಹಿವಾಟು ಮುಕ್ತಾಯಗೊಳಿಸಿತ್ತು. ರೂಪಾಯಿ ಈಗ ಪ್ರಮುಖ ಮಟ್ಟವಾಗಿ 94.80ಕ್ಕೆ ಬಂದಿರುವುದು ಗಮನ ಸೆಳೆಯುತ್ತಿದೆ ಎಂದು ಸಿಆರ್ ಫಾರೆಕ್ಸ್ ಅಡ್ವೈಸರ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಅಮಿತ್ ಪಬಾರಿ ತಿಳಿಸಿದ್ದಾರೆ. ಭಾರತದ ಸಗಟು ಬೆಲೆ ಸೂಚ್ಯಂಕ (ಡಬ್ಲ್ಯುಪಿಐ) ಆಧಾರಿತ ಹಣದುಬ್ಬರವು ಶೇ. 9.92ರಿಂದ ಶೇ. 11.39ಕ್ಕೆ ಏರಿ–ಕೆಯಾಗಿದೆ. ಆಹಾರ ಹಣದುಬ್ಬರ ಶೇ. 8.66ಕ್ಕೆ ತಲುಪಿದೆ. ಇದರೊಂದಿಗೆ ಗ್ರಾಹಕ ಬೆಲೆ ಸೂಚ್ಯಂಕ (ಸಿಪಿಐ) ಆಧಾರಿತ ಹಣದುಬ್ಬರ ಶೇ. 5.54ರಷ್ಟಿರುವುದು ಹಣದುಬ್ಬರದ ಒತ್ತಡವನ್ನು ಹೆಚ್ಚಿಸಿದೆ.

ಈ ಎರಡು ಸೂಚ್ಯಂಕಗಳಲ್ಲಿನ ಏರಿಕೆಯ ಹಿನ್ನೆಲೆಯಲ್ಲಿ ಆರ್‌ಬಿಐ ಬಡ್ಡಿದರ ಕಡಿತದ ಪರವಾದ ನಿಲುವು ತಳೆಯುವುದು ಕಷ್ಟವಾಗಬಹುದು ಎಂದು ಪಬಾರಿ ಅಭಿಪ್ರಾಯಪಟ್ಟಿದ್ದಾರೆ. ಮುಂದಿನ 12 ತಿಂಗಳಲ್ಲಿ ಬಡ್ಡಿದರ ಏರಿಕೆಯಾಗಬಹುದು ಎಂಬ ಮಾರುಕಟ್ಟೆಯ ನಿರೀಕ್ಷೆಯೂ ಹೆಚ್ಚಾಗಿದೆ. ಕಠಿಣ ಹಣಕಾಸು ನೀತಿ ಜಾರಿಗೆ ಬಂದರೆ, ಅನುಕೂಲಕರ ಬಡ್ಡಿದರ ವ್ಯತ್ಯಾಸ ಮತ್ತು ಬಡ್ಡಿ ಲಾಭ ಪಡೆಯುವ ಉದ್ದೇಶದ ಬಂಡವಾಳ ಹರಿವಿನ ಮೂಲಕ ರೂಪಾಯಿಗೆ ಬೆಂಬಲ ದೊರೆಯಬಹುದು ಎಂದು ಅವರು ಹೇಳಿದ್ದಾರೆ. ಆರು ಪ್ರಮುಖ ಕರೆನ್ಸಿಗಳ ಎದುರು ಅಮೆರಿಕದ ಡಾಲರ್‌ನ ಬಲವನ್ನು ಅಳೆಯುವ ಡಾಲರ್ ಸೂಚ್ಯಂಕವು ಶೇ. 0.54ರಷ್ಟು ಇಳಿಕೆಯಾಗಿ 101.99ಕ್ಕೆ ತಲುಪಿತ್ತು. ಜಾಗತಿಕ ಕಚ್ಚಾ ತೈಲದ ಮಾನದಂಡವಾಗಿರುವ ಬ್ರೆಂಟ್ ಕಚ್ಚಾ ತೈಲದ ಭವಿಷ್ಯದ ವಹಿವಾಟಿನ ಬೆಲೆ ಶೇ. 1.66ರಷ್ಟು ಇಳಿಕೆಯಾಗಿ ಪ್ರತಿ ಬ್ಯಾರೆಲ್‌ಗೆ 104.30 ಡಾಲರ್‌ಗೆ ತಲುಪಿತ್ತು.

ದೇಶೀಯ ಷೇರುಪೇಟೆಯಲ್ಲಿ ಗುರುವಾರ ಆರಂಭಿಕ ವಹಿವಾಟಿನ ವೇಳೆ ಏರಿಕೆ ಕಂಡುಬಂದಿತು. ಬಿಎಸ್‌ಇ ಸೆನ್ಸೆಕ್ಸ್ 354 ಅಂಕಗಳಷ್ಟು ಏರಿಕೆಯಾಗಿ 73,157.43ಕ್ಕೆ ತಲುಪಿತು. ಎನ್‌ಎಸ್‌ಇ ನಿಫ್ಟಿ 96.15 ಅಂಕಗಳ ಏರಿಕೆಯೊಂದಿಗೆ 22,726.05ರಲ್ಲಿ ವಹಿವಾಟು ನಡೆಸಿತು.

## ಬಿಡಿಎ ಕಾರಂತ ಬಡಾವಣೆ ನಿವೇಶನ ಆಕಾಂಕ್ಷಿಗಳಿಗೆ ಸಂಕಷ್ಟ: ನಿವಾಸ ಪ್ರಮಾಣಪತ್ರ ವಿಳಂಬದಿಂದ ಅರ್ಜಿ ಪ್ರಕ್ರಿಯೆ ಕುಂಠಿತ



**ಬೆಂಗಳೂರು:** ಡಾ. ಕೆ. ಶಿವರಾಮ ಕಾರಂತ ಬಡಾವಣೆಯಲ್ಲಿ ನಿವೇಶನ ಪಡೆಯಲು ಅರ್ಜಿ ಸಲ್ಲಿಸುವ ಪ್ರಕ್ರಿಯೆಗೆ 15 ವರ್ಷಗಳ ನಿವಾಸ ಪ್ರಮಾಣಪತ್ರ ಪಡೆಯುವಲ್ಲಿನ ವಿಳಂಬ ಅಡ್ಡಿಯಾಗಿದೆ. ನೋಂದಣಿ ಶುಲ್ಕ ಪಾವತಿಸಿ ಚಲನ್ ಪಡೆದಿರುವ 9,442 ಅರ್ಜಿದಾರರ ಪೈಕಿ ಕೇವಲ 2,639 ಮಂದಿ ಮಾತ್ರ ತಮ್ಮ ಅರ್ಜಿಗಳನ್ನು ಸಂಪೂರ್ಣವಾಗಿ ಸಲ್ಲಿಸಿದ್ದಾರೆ.

ಅರ್ಜಿ ಸಲ್ಲಿಸಲು ಅಗತ್ಯವಿರುವ ದಾಖಲೆಗಳನ್ನು, ವಿಶೇಷವಾಗಿ 15 ವರ್ಷಗಳ ನಿವಾಸ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಸಲ್ಲಿಸಬೇಕಿದೆ ಎಂದು ಬಿಡಿಎಯ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಆರಂಭದಲ್ಲಿ ಕಂದಾಯ ಇಲಾಖೆಯು 15 ವರ್ಷಗಳ ನಿವಾಸ ಪ್ರಮಾಣಪತ್ರ ನೀಡಲು ಹಿಂದೇಟು ಹಾಕಿ, ಬದಲಿಗೆ 10 ವರ್ಷಗಳ ನಿವಾಸ ಪ್ರಮಾಣಪತ್ರಗಳನ್ನು ನೀಡುತ್ತಿತ್ತು. ಇದರಿಂದ ಅನೇಕ ಅರ್ಜಿದಾರರಲ್ಲಿ ಗೊಂದಲ ಉಂಟಾಗಿತ್ತು. ಈ ಸಮಸ್ಯೆ ಬಿಡಿಎ ಗಮನಕ್ಕೆ ಬಂದ ಕೂಡಲೇ ಕಂದಾಯ ಇಲಾಖೆಯೊಂದಿಗೆ ಚರ್ಚಿಸಿ ಪರಿಹರಿಸಲಾಗಿದೆ ಎಂದು ಅಧಿಕಾರಿ ಹೇಳಿದ್ದಾರೆ.

## ಭಾವಿ ಪತಿಯನ್ನೇ ಹತ್ಯೆಗೈದ ರಿಂಗ್ ರೋಡ್ ಶುಭಾಗೆ ಬಿಗ್ ಶಾಕ್: ಕ್ಷಮಾದಾನ ಅರ್ಜಿ ತಿರಸ್ಕರಿಸಿದ ಸಚಿವ ಸಂಪುಟ



**ಬೆಂಗಳೂರು:** 2003ರಲ್ಲಿ ರಾಜ್ಯಾದ್ಯಂತ ಭಾರೀ ಸಂಚಲನ ಸೃಷ್ಟಿಸಿದ್ದ ರಿಂಗ್ ರೋಡ್ ಶುಭಾ ಪ್ರಕರಣ ಮತ್ತೆ ಮುನ್ನೆಲೆಗೆ ಬಂದಿದೆ. ಗಿರೀಶ್ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಶುಭಾ ಶಂಕರನಾರಾಯಣ ಮತ್ತು ಡಿ. ಅರುಣ್ ವರ್ಮಾ ಸಲ್ಲಿಸಿದ್ದ ಕ್ಷಮಾದಾನ ಅರ್ಜಿಗಳನ್ನು ರಾಜ್ಯ ಸಚಿವ ಸಂಪುಟ ಸಭೆ ತಿರಸ್ಕರಿಸಿದೆ.

ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು, ಶುಭಾ ಹಾಗೂ ಅರುಣ್ ಸಲ್ಲಿಸಿದ್ದ ಕ್ಷಮಾದಾನ ಅರ್ಜಿಗಳನ್ನು ತಿರಸ್ಕರಿಸಲಾಗಿದೆ ಎಂದರು.

ಶುಭಾ ಹಾಗೂ ಅರುಣ್ ವರ್ಮಾ ಕ್ಷಮಾದಾನ ಕೋರಿ ರಾಜ್ಯಪಾಲರ ಮುಂದೆ ಅರ್ಜಿ ಸಲ್ಲಿಸಿದ್ದು, ಈ ಅರ್ಜಿಗಳ ಕುರಿತು ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಯಿತು. ಅಂತಿಮವಾಗಿ ಸಂಪುಟ ಸಭೆ ಕ್ಷಮಾದಾನ ಅರ್ಜಿಯನ್ನು ತಿರಸ್ಕಾರ ಮಾಡಿದೆ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

ಅಪರಾಧದ ತೀವ್ರತೆ ಹಾಗೂ ಸಮಾಜದ ಮೇಲೆ ಬೀರಿದ ಪರಿಣಾಮವನ್ನು ಪರಿಗಣಿಸಿದ ಸಚಿವ ಸಂಪುಟ, ಯಾವುದೇ ಕಾರಣಕ್ಕೂ ಕ್ಷಮಾದಾನ ನೀಡಲು ಸಾಧ್ಯವಿಲ್ಲ ಎಂಬ ತೀರ್ಮಾನಕ್ಕೆ ಬಂದು ಅರ್ಜಿಯನ್ನು ತಿರಸ್ಕರಿಸಿದೆ. ಈ ಕ್ಷಮಾದಾನ ಅರ್ಜಿ ಇಲ್ಲಿನ ಕಾನೂನು ಚೌಕಟ್ಟಿನ ಒಳಗಿಲ್ಲ. ಕ್ಷಮಾದಾನ ಅರ್ಜಿ ತಿಸ್ಕರಿಸಿ ರಾಜ್ಯಪಾಲರಿಗೆ ಮಾಹಿತಿ ನೀಡಲಾಗುತ್ತದೆ ಎಂದು ಖರ್ಗೆ ತಿಳಿಸಿದ್ದಾರೆ.

# ಜ್ಞಾನೇಶ್ ಕುಮಾರ್ ರಕ್ಷಿಸಲು ತಮ್ಮದೇ ದೇಶವಾಸಿಗಳ ಮೇಲೆ ನರೇಂದ್ರ ಮೋದಿ, ಶಾ ಯುದ್ಧ ಸಾರಿದ್ದಾರೆ

## ಕೇಂದ್ರ ಸರ್ಕಾರದ ಮೇಲೆ ದಿಪ್ಕೆ ಆರೋಪ




**ನವದೆಹಲಿ:** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಭಾರಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಿ, ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಸಿಜೆಪಿ ಹಾಗೂ ವಿರೋಧ ಪಕ್ಷಗಳು ಹಮ್ಮಿಕೊಂಡಿದ್ದ ಪ್ರತಿಭಟನೆಯ ಕಾವು ಮತ್ತಷ್ಟು ಬಿಸಿಯಾಗಿದ್ದು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ರಕ್ಷಿಸಲು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ತಮ್ಮದೇ ದೇಶವಾಸಿಗಳ ವಿರುದ್ಧ ಯುದ್ಧ ಸಾರಿದ್ದಾರೆ ಎಂದು ಕಾಕ್‌ರೋಚ್ ಜನತಾ ಪಾರ್ಟಿ ಸಂಸ್ಥಾಪಕ ಅಭಿಜೀತ್ ದಿಪ್ಕೆ ಆರೋಪಿಸಿದ್ದಾರೆ. ಜೊತೆಗೆ, ಆಯೋಗದ ಮುಖ್ಯಸ್ಥರ ರಾಜೀನಾಮೆಗೆ ಆಗ್ರಹಿಸುತ್ತಿರುವ ಪ್ರತಿಭಟನಾಕಾರರು ಮತ್ತು ವಿರೋಧ ಪಕ್ಷದ ನಾಯಕರನ್ನು ಬಂಧಿಸುತ್ತಿರುವುದನ್ನು ಪ್ರಶ್ನಿಸಿದ್ದಾರೆ.

ವಿದ್ಯಾರ್ಥಿನಾಯಕಿಯಾರದ ನೇಹಾ ಬೋರಾ, ಆಯಿಷೆ ಘೋಷ್ ಮತ್ತು ನಟ ಪ್ರಕಾಶ್ ರಾಜ್ ಜೊತೆಗೆ ಜಂಟಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ದಿಪ್ಕೆ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಕ್ಕಾಗಿ ವಿದ್ಯಾರ್ಥಿಗಳು, ಯುವ ಪ್ರತಿಭಟನಾಕಾರರು, ವಿರೋಧ ಪಕ್ಷದ ನಾಯಕರು ಮತ್ತು ಮಾಜಿ ಮುಖ್ಯಮಂತ್ರಿಗಳು ಬಂಧನಕ್ಕೊಳಗಾಗಿದ್ದಾರೆ ಎಂದು ಆರೋಪಿಸಿದರು. ಪ್ರತಿಭಟನೆಗೆ ಪ್ರತಿಯಾಗಿ ದೆಹಲಿಯಾದ್ಯಂತ ಮೆಟ್ರೋ ನಿಲ್ದಾಣಗಳ ಮುಚ್ಚುವಿಕೆ ಮತ್ತು ರೈಲ್ವೆ ಸೇವೆಗಳ ನಿರ್ಬಂಧ ಸೇರಿದಂತೆ ವ್ಯಾಪಕ ಭದ್ರತಾ ಕ್ರಮಗಳನ್ನು ಸರ್ಕಾರ ಏಕೆ ಜಾರಿಗೊಳಿಸಿದೆ ಎಂದು ಅವರು ಪ್ರಶ್ನಿಸಿದರು. ಈ ಮೂಲಕ ಸಿಇಸಿ ಜ್ಞಾನೇಶ್ ಕುಮಾರ್ ಅವರನ್ನು ರಕ್ಷಿಸಲು ಸರ್ಕಾರವು ಇಡೀ ಸರ್ಕಾರಿ ಯಂತ್ರವನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಆರೋಪಿಸಿದ ದಿಪ್ಕೆ, ಪ್ರತಿಭಟನೆಗಳನ್ನು ಹತ್ತಿಕ್ಕಲು ಮೆಟ್ರೋ ನಿಲ್ದಾಣಗಳನ್ನು ಮುಚ್ಚಿರುವುದು, ರೈಲು ಸೇವೆಗಳ ಮೇಲೆ ನಿರ್ಬಂಧ ಹೇರಿರುವುದು ಮತ್ತು ಜಮ್ಮು ಮತ್ತು ಕಾಶ್ಮೀರದಿಂದ ಭದ್ರತಾ ಪಡೆಗಳನ್ನು ಕರೆಸಿ ದೆಹಲಿಯನ್ನು ಕೋಟೆಯನ್ನಾಗಿ ಮಾಡಿರುವುದನ್ನು ಪ್ರಶ್ನಿಸಿದ್ದಾರೆ.

ಇದೇ ವೇಳೆ, ಶಾಂತಿಯುತ ಪ್ರತಿಭಟನೆಗಳಲ್ಲಿ ರಾಷ್ಟ್ರಧ್ವಜ ಹಾರಿಸುವುದನ್ನೇ ಕಾನೂನು ಉಲ್ಲಂಘನೆ ಎಂಬಂತೆ ಅಧಿಕಾರಿಗಳು ಪರಿಗಣಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ ದಿಪ್ಕೆ, ಸಿಇಸಿ ಅವರಿಗೆ ಕೇಂದ್ರ ಸರ್ಕಾರ ನೀಡುತ್ತಿರುವ ಅತಿಯಾದ ರಕ್ಷಣೆ–ಯು, ಅವರು ಬಿಜೆಪಿಗೆ ಚುನಾವಣೆಗಳನ್ನು ಗೆಲ್ಲಲು ನೆರವಾಗುತ್ತಿದ್ದಾರೆಯೇ ಎಂಬ ಅನುಮಾನವನ್ನು ಹುಟ್ಟುಹಾಕುತ್ತದೆ ಎಂದು ಆರೋಪಿಸಿದ್ದಾರೆ. ಮುಂದುವರೆದು, ಜಂತರ್ ಮಂತರ್ ಪ್ರದೇಶವನ್ನು ಇತ್ತೀಚೆಗೆ ಪ್ರತಿಭಟನಾ ಸ್ಥಳದಿಂದ ರದ್ದುಪಡಿಸಲಾಗಿತ್ತು. ಆದರೆ, ಮಂಗಳವಾರ ಬ್ಯಾರಿಕೇಡ್‌ಗಳನ್ನು ದಾಟಿ ಜಂತರ್ ಮಂತರ್ ಪ್ರವೇಶಿಸಿ ಘೋಷಣೆ ಕೂಗಿದ ಆರೋಪದ ಮೇಲೆ ಸಿಜೆಪಿ ಮುಖಂಡರಾದ ಸೌರವ್ ದಾಸ್, ಅಶುತೋಷ್ ರಾಂಕಾ ಮತ್ತು ಅಜಿಂಕ್ಯ ಶಿಂಧೆ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದರು. ಸಾರ್ವಜನಿಕ ಅಧಿಕಾರಿಯ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದಡಿ ಪ್ರಕರಣ ದಾಖಲಿಸಲಾಗಿದ್ದು, ನ್ಯಾಯಾಲಯವು ಸೌರವ್ ದಾಸ್ ಮತ್ತು ಅಶುತೋಷ್ ರಾಂಕಾ ಅವರಿಗೆ 5 ದಿನಗಳ ನ್ಯಾಯಾಂಗ ಬಂಧನ ವಿಧಿಸಿ ತಿಹಾರ್ ಜೈಲಿಗೆ ಕಳುಹಿಸಿದೆ. ಜೊತೆಗೆ, ಅಜಿಂಕ್ಯ ಶಿಂಧೆ ಅವರನ್ನು ವೈಯಕ್ತಿಕ ಬಾಂಡ್ ಮೇಲೆ ಬಿಡುಗಡೆ ಮಾಡಲಾಗಿದೆ. ಹಾಗಾಗಿ, ಸಿಜೆಪಿ ಮುಖಂಡರ ಬಂಧನವನ್ನು ವಿರೋಧಿಸಿ, ಶುಕ್ರವಾರ ಸಂಜೆ 5 ಗಂಟೆಗೆ ದೆಹಲಿಯ ಕನ್ನಾಟ್ ಪ್ಲೇಸ್‌ನ ಸೆಂಟ್ರಲ್ ಪಾರ್ಕ್‌ನಲ್ಲಿ 'ತಿರಂಗಾ ಮೋರ್ಚಾ' ನಡೆಸುವುದಾಗಿ ಅಭಿಜಿತ್ ದಿಪ್ಕೆ ಘೋಷಿಸಿದ್ದು, ಸಾರ್ವಜನಿಕರು ಭಾಗವಹಿಸುವಂತೆ ಕರೆ ನೀಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಎಐಎಸ್‌ಎ ಕಾರ್ಯಕರ್ತೆ ನೇಹಾ ಬೋರಾ, ಪ್ರತಿಭಟನೆಯನ್ನು ವರದಿ ಮಾಡುತ್ತಿದ್ದ ಪತ್ರಕರ್ತರನ್ನು ಪೊಲೀಸರು ಬೆದರಿಸುತ್ತಿದ್ದಾರೆ ಎಂದು ಆರೋಪಿಸಿದರು. ಪತ್ರಕರ್ತರ ಕ್ಯಾಮೆರಾಗಳನ್ನು ಕಸಿದುಕೊಳ್ಳಲಾಗಿದ್ದು, ವರದಿ ಮಾಡುವುದನ್ನು ಮುಂದುವರಿಸಿದರೆ ಕ್ಯಾಮೆರಾ ವಾಪಸ್ ನೀಡುವುದಿಲ್ಲ ಎಂದು ಬೆದರಿಕೆ ಹಾಕಲಾಗಿದೆ. ಜೊತೆಗೆ, ದೆಹಲಿ ಎಸಿಪಿ ವಿವೇಕ್ ಭಗತ್ ಅವರು ಮಹಿಳಾ ಪತ್ರಕರ್ತೆಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಿದ ಬೋರಾ, ಆಕೆ ದೂರು ದಾಖಲಿಸಲು ಠಾಣೆಗೆ ಹೋದಾಗ ಪೊಲೀಸರು ಆ ಪತ್ರಕರ್ತೆಯ ವಿರುದ್ಧವೇ ಕೌಂಟರ್ ಎಫ್‌ಐಆರ್ ದಾಖಲಿಸಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಈ ಮೂಲಕ ಪೊಲೀಸರು ಕಾನೂನು ಸುವ್ಯವಸ್ಥೆ ಕಾಪಾಡುವ ಬದಲು ಒಂದು ನಿರ್ದಿಷ್ಟ ರಾಜಕೀಯ ಪಕ್ಷವನ್ನು ಬೆಂಬಲಿಸಿ, ನ್ಯಾಯ ಕೇಳುವ ಸಾರ್ವಜನಿಕರ ಮೇಲೆಯೇ ದಬ್ಬಾಳಿಕೆ ನಡೆಸುತ್ತಿದ್ದಾರೆ ಎಂದು ಟೀಕಿಸಿದ್ದಾರೆ.

## ಅನಿರ್ದಿಷ್ಟಾವಧಿ ಧರಣಿ

ಬಸ್ ಒದಗಿಸಬೇಕು. ಬಸ್ ವೇಳಾಪಟ್ಟಿ ನಿಗದಿಪಡಿಸಿ ಸಮಯಕ್ಕೆ ಸರಿಯಾಗಿ ಸಂಚರಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದರು.

ಜಿಲ್ಲಾ ಕಾರ್ಯದರ್ಶಿ ಸಂದೇರ ಪರಶುರಾಮ್ ಮಾತನಾಡಿ, ಹರಪನಹಳ್ಳಿ ನಗರಸಭೆ ವ್ಯಾಪ್ತಿಯಲ್ಲಿ ನಗರ ಸಾರಿಗೆಗೆ ಮಂಜೂರಾದ ಅನುದಾನ, ಬಿಡುಗ–'ಡೆಯಾದ ಮೊತ್ತ ಹಾಗೂ ಖರ್ಚಿನ ಸಂಪೂರ್ಣ ವರದಿ ನೀಡಬೇಕು. ಕೈಗೊಂಡ ಕಾಮಗಾರಿಗಳು ಮತ್ತು ಪ್ರಗತಿ ವರದಿಯನ್ನು ಸಾರ್ವಜನಿಕಗೊಳಿಸಬೇಕು. ಅನುದಾನ ಬಳಕೆಯಲ್ಲಿ ಲೋಪದೋಷ ಕಂಡುಬಂದರೆ ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಮಸ್ಯೆ ತಕ್ಷಣ ಬಗೆಹರಿಸದಿದ್ದರೆ ಘೇರಾವ್ ಮತ್ತು ಕಪ್ಪು ಬಾವುಟ ಪ್ರದರ್ಶನ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಕೆಎಸ್‌ಆರ್‌ಟಿಸಿ ಘಟಕ ವ್ಯವಸ್ಥಾಪಕಿ ಸುಶೀಲಾ ಮನವಿ ಸ್ವೀಕರಿಸಿ, ಮೇಲಾಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸುವುದಾಗಿ ತಿಳಿಸಿದರು.

ಧರಣಿಯಲ್ಲಿ ಸಂಚಾರ ನಿಯಂತ್ರಕ ಬಿ.ಎಂ.ನಾಗರಾಜ್, ಮೇಲ್ವಿಚಾರಕರಾದ ಶಿವರುದ್ರಗೌಡ, ಪ್ರಸನ್ನ, ತಾಲೂಕು ಅಧ್ಯಕ್ಷ ಮೋಹನ್ ಕುಮಾರ್, ಕಾರ್ಯದರ್ಶಿ ಕೃಷ್ಣ ಮಲ್ಲಾರದ, ಭರತ್, ಮಿಥುನ್, ವಿನಯ್, ಚೈತ್ರಾ, ಸುಜಾತಾ, ಲಕ್ಷ್ಮೀ, ಪಲ್ಲವಿ, ರಶ್ಮಿಕಾ ಸೇರಿದಂತೆ ಅನೇಕ ವಿದ್ಯಾರ್ಥಿಗಳು ಇದ್ದರು.

# ಬಿಟ್ಟು ತಬಾಹಿಯ ಎಂಟು ತಿಂಗಳ ಶ್ರಮ ನೀರಿನಲ್ಲಿ ಹೋಮ; ಅಜ್ನಾರ್ ನದಿಯಲ್ಲಿ ಮತ್ತೆ ಕಸದ ರಾಶಿ



**ನವದೆಹಲಿ:** ತ್ಯಾಜ್ಯ ನಿರ್ವಹಣೆ ಬಗ್ಗೆ ಸರಕಾರ ಎಷ್ಟೇ ಅರಿವು ಮೂಡಿಸಿದರೂ ನಮ್ಮ ಸ್ವಂತ ಜವಾಬ್ದಾರಿಯನ್ನು ಮರೆತುಬಿಟ್ಟಿದ್ದೇವೆ. ನಮ್ಮಲ್ಲಿ ನಾಗರಿಕ ಪ್ರಜ್ಞೆ ಕೊರೆತು ಇದ್ದರೂ ಸರಕಾರಕ್ಕೆ ದೂರುತ್ತೇವೆ. ಇದಕ್ಕೆ ಸಾಕ್ಷಿ ಎನ್ನುವಂತೆ ನೀವು ಪರಿಸರ ಕಾಳಜಿ ವಹಿಸುವ ಬಿಟ್ಟು ತಬಾಹಿ ಬಗ್ಗೆ ಕೇಳಿರಬಹುದು.

ವಿವಿಧ ನಗರಗಳಲ್ಲಿ ಸ್ವಚ್ಛತಾ ಕಾರ್ಯ ಆರಂಭಿಸಿ ಪರಿಸರ ಕಾಳಜಿಗೆ ಒತ್ತು ನೀಡಿದ್ದರು. ಅದರಲ್ಲೂ ಮಧ್ಯಪ್ರದೇಶದ ರಾಜ–ಘರ್ ಜಿಲ್ಲೆಯಲ್ಲಿರುವ ಅಜ್ನಾರ್ ನದಿಯನ್ನು ಒಬ್ಬಂಟಿಯಾಗಿ ತನ್ನ ಕೈಯಿಂದಲೇ 8 ತಿಂಗಳು ಹಗಲಿರುಳು ಶ್ರಮಿಸಿ ಸ್ವಚ್ಛಗೊಳಿಸಿದ್ದರು. ಆದರೆ ಇಷ್ಟೆಲ್ಲ ಕಷ್ಟ ಪಟ್ಟಿದ್ದರೂ ಜನ ಕೆಲವೇ ವಾರಗಳಲ್ಲಿ ಮತ್ತೆ ಕಸದ ತೊಟ್ಟಿಯಾಗಿ ಮಾರ್ಪಡಿಸಿದ್ದಾರೆ. ಈ ಸ್ಥಿತಿ ಕಣ್ಣಾರೆ ಕಂಡು ಪರಿಸರ ಪ್ರೇಮಿ ಬಿಟ್ಟು ತಬಾಹಿ ಕಣ್ಣೀರಿಟ್ಟಿದ್ದಾರೆ.

ಎಂಟು ತಿಂಗಳ ಕಾಲ ಶ್ರಮಪಟ್ಟು ಸ್ವಚ್ಛಗೊಳಿಸಿದ ನಂತರವೂ, ಮಧ್ಯಪ್ರದೇಶದ ಅಜ್ನಾರ್ ನದಿ ಮತ್ತೆ ಕಸದಿಂದ ತುಂಬಿರುವುದನ್ನು ನೋಡಿ ಬಿಟ್ಟು ತಬಾಹಿ ಬೇಸರ ವ್ಯಕ್ತಪಡಿಸಿದ್ದಾರೆ. ಈ ಘಟನೆಯು ಪರಿಸರ ಪ್ರೇಮಿಗಳಲ್ಲಿ ಆಕ್ರೋಶವನ್ನು ಉಂಟುಮಾಡಿದ್ದು, ನಾಗರಿಕ ಜವಾಬ್ದಾರಿಯ ಬಗ್ಗೆ ಪ್ರಶ್ನೆ ಮಾಡಿದ್ದಾರೆ.

ಪರಿಸರ ಕಾರ್ಯಕರ್ತ ಸುರೇಂದ್ರ ಸಿಂಗ್ ಚೌಧರಿ 'ಬಿಟ್ಟು ತಬಾಹಿ' ಎಂದೇ ಖ್ಯಾತರಾದ ಇವರ ಪರಿಸರ ಕಾಳಜಿಗೆ ದೇಶಾದ್ಯಂತ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿತ್ತು. ಆದರೆ ಇದೀಗ ಎಂಟು ತಿಂಗಳ ಕಾಲ ಶ್ರಮಪಟ್ಟು ಸ್ವಚ್ಛಗೊಳಿಸಿದ ಕೆಲವೇ ವಾರಗಳಲ್ಲಿ, ಮಧ್ಯಪ್ರದೇಶದ ರಾಜಗಢ ಜಿಲ್ಲೆಯಲ್ಲಿರುವ ಅಜ್ನಾರ್ ನದಿಯಲ್ಲಿ ಮತ್ತೆ ಪ್ಲಾಸ್ಟಿಕ್ ಚೀಲಗಳು ಮತ್ತು ಇತರ ತ್ಯಾಜ್ಯಗಳಿಂದ ತುಂಬಿರುವುದನ್ನು ಪರಿಸರ ಕಾರ್ಯಕರ್ತರು ಕಂಡುಕೊಂಡಿ–ದ್ದಾರೆ.

ಈ ಕುರಿತು ಇನ್‌ಸ್ಟಾಗ್ರಾಮ್‌ನಲ್ಲಿ ವಿಡಿಯೋ ಹಂಚಿಕೊಂಡಿರುವ ಬಿಟ್ಟು ತಬಾಹಿ, "ನನ್ನ 8 ತಿಂಗಳ ಕಷ್ಟ ಹೀಗೆ ಮಣ್ಣು ಪಾಲಾಗುತ್ತದೆ ಎಂದು ಊಹಿಸಿ ಇರಲಿಲ್ಲ ಎಂದು ತಮ್ಮ ಅಳಲು ತೋಡಿ ಕೊಂಡಿ–ದ್ದಾರೆ. ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡ ವಿಡಿಯೋವೊಂದರಲ್ಲಿ ನದಿಯ ಪ್ರಸ್ತುತ ಸ್ಥಿತಿಯನ್ನು ತೋರಿಸಿದ್ದಾರೆ. ನದಿಯ ದಡದಲ್ಲಿ ಕಸ ಬಿದ್ದಿರುವುದನ್ನು ಈ ದೃಶ್ಯಗಳು ತೋರಿಸುತ್ತವೆ. ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಪ್ರತಿಕ್ರಿಯೆಗಳನ್ನು ಹುಟ್ಟುಹಾಕಿದೆ. ನೆಟ್ಟಿಗರು ಚೌಧರಿ ಅವರ ಬಗ್ಗೆ ಸಹಾನುಭೂತಿ ವ್ಯಕ್ತಪಡಿಸಿದ್ದು ನದಿಗಳನ್ನು ಮತ್ತೆ ಕಸದ ತೊಟ್ಟಿಯನ್ನಾಗಿ ಪರಿವರ್ತಿಸುವ ಜನರ ನಾಗರಿಕ ಪ್ರಜ್ಞೆಯ ಕೊರತೆಯನ್ನು ಟೀಕಿಸಿ ದ್ದಾರೆ. ಇಷ್ಟೆಲ್ಲಾ ಅನ್ಯಾಯ ನಡೆದರೂ ಬಿಟ್ಟು ತಬಾಹಿ ಸುಮ್ಮನೆ ಬಿಟ್ಟಿಲ್ಲ. ಆ ವಿಡಿಯೋದಲ್ಲೇ ಮತ್ತೆ ನದಿಗಿಳಿದು ಕಸವನ್ನು ಹೊರತೆಗೆಯುವ ಕೆಲಸವನ್ನು ಅವರು ಪುನರಾರಂಭಿಸಿದ್ದಾರೆ

ಮಧ್ಯ ಪ್ರದೇಶದ ರಾಜ್‌ಗಢ ಜಿಲ್ಲೆಯಲ್ಲಿ ಬಿಟ್ಟು ಈ ಸ್ವಚ್ಛತಾ ಕಾಯಕ ಆರಂಭಿಸಿದ್ದರು. 2026ರ ಜನವರಿ 26ರಂದು ಸ್ನೇಹಿತರೊಂದಿಗೆ ಅಜ್ನಾರ್ ನದಿಯನ್ನು ಸ್ವಚ್ಛಗೊಳಿಸಲು ಇಳಿದ ಅವರು, ಕಾಲ ಕ್ರಮೇಣ ಏಕಾಂಗಿಯಾಗಿಯೇ ಈ ಕಾರ್ಯ ಮುಂದುವರಿಸಿದ್ದಾರೆ.

## ಒಪಿಡಿ ಕೌಂಟರ್‌ನಲ್ಲಿಟ್ಟಿದ್ದ 1 ಲಕ್ಷ ರೂ.ನಗದು ಕಳವು

**ಕಲಬುರಗಿ:** ಹಲ್ಲಿನ ಆಸ್ಪತ್ರೆಯೊಂದರ ಒಪಿಡಿ ಕೌಂಟರ್‌ನಲ್ಲಿ ಇಟ್ಟಿದ್ದ 1 ಲಕ್ಷ ರೂ.ನಗದು ಹಣ ಕಳವಾಗಿರುವ ಘಟನೆ ನಗರದಲ್ಲಿ ನಡೆದಿದೆ. ನಬೀಜ್ ಉರ್ ರೆಹೇಮಾನ್ ಅವರು ನಗರದ ಸಂತ್ರಾಸವಾಡಿಯ ಸಿಟಿ ಬಸ್ ನಿಲ್ದಾಣದ ಎದುರುಗಡೆಯ ಅಪಾರ್ಟ್‌ಮೆಂಟ್ ಒಂದರಲ್ಲಿ ಡೆಂಟಲ್ ಕ್ಯೂರ್ ಎಂಬ ಹೆಸರಿನ ಹಲ್ಲಿನ ಆಸ್ಪತ್ರೆ ನಡೆಸುತ್ತಿದ್ದು,

ಇವರು ಅ.12 ರಂದು ಮಧ್ಯಾಹ್ನ ನಮಾಜ್ ಮಾಡಲು ಪತ್ನಿಯೊಂದಿಗೆ ಮನೆಗೆ ಹೋಗುವಾಗ 1 ಲಕ್ಷ ರೂಪಾಯಿ ನಗದು ಹಣವನ್ನು ಆಸ್ಪತ್ರೆಯ ಒಪಿಡಿ ಕೌಂಟರ್‌ನಲ್ಲಿ ಇಟ್ಟು ಹೋಗಿದ್ದಾರೆ ಎಂದು ತಿಳಿದುಬಂದಿದೆ.

ಮನೆಗೆ ಹೋಗಿ ಮರಳಿ ಆಸ್ಪತ್ರೆಗೆ ಬರುವುದರೊಳಗೆ ಕಳ್ಳರು ಆಸ್ಪತ್ರೆಯ ಅಲುಮಿನಿಯಂ ಬಾಗಿಲು ಮುರಿದು ಒಪಿಡಿ ಕೌಂಟರ್‌ನಲ್ಲಿಟ್ಟಿದ್ದ 1 ಲಕ್ಷ ರೂ.ಕಳವು ಮಾಡಿದ್ದಾರೆ ಎಂದು ತಿಳಿದುಬಂದಿದೆ. ಈ ಸಂಬಂಧ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಕೃಷಿ ಪಂಪ್‌ಸೆಟ್‌ಗಳಿಗೆ 7 ಗಂಟೆ ಗುಣಮಟ್ಟದ ವಿದ್ಯುತ್ ಪೂರೈಸಲು ಹಲಗಿ ಸುರೇಶ ಒತ್ತಾಯ

(1ನೇ ಪುಟದಿಂದ)

ಸಲ್ಲಿಸಿದರೂ ಸೂಕ್ತ ಸ್ಪಂದನೆ ದೊರೆತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕೆಆರ್‌ಎಸ್ ಪಕ್ಷದ ಚಂದ್ರಶೇಖರ ಮಾತನಾಡಿ, ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ವೇಳೆಯಲ್ಲಿ ನಿರಂತರ ಏಳು ಗಂಟೆಗಳ ಗುಣಮಟ್ಟದ ತ್ರಿಫೇಸ್ ವಿದ್ಯುತ್ ಪೂರೈಸಬೇಕು. ಅನಗತ್ಯ ವಿದ್ಯುತ್ ಕಡಿತ ತಡೆದು, ರೈತರಿಗೆ ಅನುಕೂಲವಾಗುವ ವೇಳಾಪಟ್ಟಿಯನ್ನು ಪ್ರಕಟಿಸಿ ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಆಗ್ರಹಿಸಿದರು.

ರೈತ ಸಂಘದ ಕಾರ್ಯದರ್ಶಿ ಶಿವರಾಜ್ ಮಾತನಾಡಿ, ವಿದ್ಯುತ್ ಪೂರೈಕೆಯಲ್ಲಿನ ತಾಂತ್ರಿಕ ದೋಷಗಳನ್ನು ತ್ವರಿತವಾಗಿ ಸರಿಪಡಿಸಿ, ನಿರಂತರ ಮೇಲ್ವಿಚಾರಣೆ ನಡೆಸಬೇಕು. ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಸರ್ಕಾರ ಹಾಗೂ ಜೆಸ್ಕಾಂ ಅಧಿಕಾರಿಗಳು ತುರ್ತು ಸಭೆ ನಡೆಸಬೇಕು ಎಂದರು.

ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಗೌರವಾಧ್ಯಕ್ಷ ಬಾಣದ ಶಿವಣ್ಣ ಮಾತನಾಡಿ, ರೈತರು ದೇಶದ ಅನ್ನದಾತರಾಗಿದ್ದು, ಕೃಷಿಗೆ ಅಗತ್ಯವಾದ ವಿದ್ಯುತ್ ಸಕಾಲದಲ್ಲಿ ದೊರೆಯುವುದು ಅತ್ಯವಶ್ಯಕವಾಗಿದೆ ಎಂದು ಹೇಳಿದರು.

ಎಐಟಿಯುಸಿ ಮುಖಂಡ ಹಲಗಿ ಸುರೇಶ ಮಾತನಾಡಿ, ಜೆಸ್ಕಾಂ ಇಲಾಖೆಯಲ್ಲಿನ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬೇಕು. ರೈತರ ಟ್ರಾನ್ಸ್‌ಫಾರ್ಮರ್‌ಗಳು (ಟಿಸಿ) ಸುಟ್ಟಾಗ ದುರಸ್ತಿಗಾಗಿ ರೂ.30 ಸಾವಿರದಿಂದ ರೂ. 50 ಸಾವಿರದವರೆಗೆ ಹಣ ವಸೂಲಿ ಮಾಡಲಾಗುತ್ತಿದೆ. ಎಸ್ .ಓ.ಗಳು ಅಕ್ರಂ ಆಸ್ತಿ ಮಾಡುತ್ತಿದ್ದಾರೆ.ಅವರೆ ಗುತ್ತಿಗೆದಾರರ ಅವರ ಕುಟುಂಬದವರ ಹೆಸರಿನಲ್ಲಿ ಟೇಂಡರ್ ಹಾಕಿ ರೈತರಿಗೆ ಸರಿಯಾದ ಸಮಯಕ್ಕೆ ಕಾಮಗಾರಿ ಅರೆ ಬರೆ ಮಾಡಿ ಬಿಲ್ ಪಾವತಿ ಆಗಿರುತ್ತವೆ. ಎಂಬ ಆರೋಪಗಳಿದ್ದು, ಇಂತವರ ಬಗ್ಗೆ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು. ಹಣ ಪಡೆದು ನಕಲಿ ಆರ್‌ಆರ್ ಸಂಖ್ಯೆ ನೀಡಿರುವ ಉದಾಹರಣೆಗಳೂ ಇವೆ ಎಂದು ಆರೋಪಿಸಿದರು. ರೈತರ ನ್ಯಾಯಯುತ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ವಿಠ್ಠಲ್ ನಾಯ್ಕ, ಪಕ್ಕಿರೇಶ ಬೂದನೂರು, ಮಂಜುನಾಥ ಕೊಂಬಳಿ, ಅಂಚೆ ಮಂಜುನಾಥ, ಸುಭಾನ್ ಹುಗಲೂರು, ಮುಜ್ಜು, ಜಂಗ್ಲಿಸಾಬ್, ಇಟಗಿ ರಮೇಶ್ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು ನಂತರ ಸಂಜೆ ಆರು ಗಂಟೆಗೆ ತನಕ ಇಲಾಖೆ ಮುಂಬಾಗದಲ್ಲಿ ಪ್ರತಿಭಟನೆ ನಡೆಸಿದರು ನಂತರ ಸಿಪಿಐ ಮಲ್ಲಪ್ಪ ಹೂಗಾರ ರವರು ರೈತರನ್ನು ಮನವೊಲಿಸಿ ತಾತ್ಕಾಲಿಕ ಹೊರಾಟ ಹಿಂಪಡೆಯಲಾಯಿತು.

# ಬಳ್ಳಾರಿ ಪಾಲಿಕೆ ಕಾಮಗಾರಿಗಳಲ್ಲಿ ತಾರತಮ್ಯದ ಆರೋಪ: ವಾರ್ಡ್ 9ರಲ್ಲಿ ಸ್ಥಳೀಯರ ಆಕ್ರೋಶ

## ರಸ್ತೆ ಅಗಲ, ಚರಂಡಿ ನಿರ್ಮಾಣದಲ್ಲಿ ಏರುಪೇರು ಆರೋಪ; ಸ್ಥಳ ಪರಿಶೀಲನೆಗೆ ಸಾರ್ವಜನಿಕರ ಆಗ್ರಹ

**ಹೊಸಪೇಟೆ ಧ್ವನಿ ನ್ಯೂಸ್ :**

**ಬಳ್ಳಾರಿ :** ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗಳಲ್ಲಿ ತಾರತಮ್ಯ, ಅವೈಜ್ಞಾನಿಕ ಯೋಜನೆ ಮತ್ತು ಅಳತೆಯಲ್ಲಿನ ವ್ಯತ್ಯಾಸಗಳಾಗುತ್ತಿವೆ ಎಂಬ ಆರೋಪಗಳು ಕೇಳಿಬಂದಿವೆ. ನಗರದ 9ನೇ ವಾರ್ಡ್‌ನ ರಸ್ತೆ ಮತ್ತು ವೆಂಕಟಮ್ಮ ಕಾಲನಿ ಪ್ರದೇಶದಲ್ಲಿ ನಡೆಯುತ್ತಿರುವ ಕಾಮಗಾರಿಗಳ ಕುರಿತು ಸ್ಥಳೀಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಮೂಲಸೌಕರ್ಯ ಕಲ್ಪಿಸುವ ಉದ್ದೇಶದಿಂದ ರಸ್ತೆ, ಚರಂಡಿ ಹಾಗೂ ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಆದರೆ, ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದಲ್ಲಿ ನಿಯಮಗಳನ್ನು ಪಾಲಿಸಲಾಗುತ್ತಿದೆಯೇ ಎಂಬ ಪ್ರಶ್ನೆ ಇದೀಗ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

ಒತ್ತುವರಿ ತೆರವಿನಲ್ಲಿ ತಾರತಮ್ಯದ ಆರೋಪ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅನುದಾನದಡಿ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ. ರಸ್ತೆ ಮತ್ತು ಚರಂಡಿ ನಿರ್ಮಾಣದ ಸಂದರ್ಭದಲ್ಲಿ ಕೆಲವು ಕಡೆ ಒತ್ತುವರಿ ತೆರವುಗೊಳಿಸಲು ಮುಂದಾಗುತ್ತಿದ್ದರೆ, ಇನ್ನು ಕೆಲವು ಕಡೆಗಳಲ್ಲಿ ಅದೇ ರೀತಿಯ ಕ್ರಮ ಕೈಗೊಳ್ಳುತ್ತಿಲ್ಲ ಎಂಬುದು ಸ್ಥಳೀಯರ ಆರೋಪವಾಗಿದೆ.

ಪಾಲಿಕೆ ಸದಸ್ಯ ಜಬ್ಬಾರ್ ಅವರು ತಮಗೆ ಅನುಕೂಲವಾಗುವವರ ವಿರುದ್ಧ ಕ್ರಮ ಕೈಗೊಳ್ಳದೆ, ಪ್ರಶ್ನಿಸುವವರ ಸ್ಥಳಗಳಲ್ಲಿ ಮಾತ್ರ ಒತ್ತುವರಿ ತೆರವಿಗೆ ಮುಂದಾಗುತ್ತಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ. ಈ ಕುರಿತು ಸಂಬಂಧಪಟ್ಟ ಜನಪ್ರತಿನಿಧಿಗಳು ಸ್ಪಷ್ಟನೆ ನೀಡಬೇಕಿದೆ.

**ರಸ್ತೆ ಅಗಲದಲ್ಲಿ ಏರುಪೇರು : ತಾಂತ್ರಿಕ ಸ್ಪಷ್ಟನೆಗೆ ಆಗ್ರಹ :** ಕಾಮಗಾರಿಗಳಲ್ಲಿ ಕೆಲವು ಕಡೆ 21 ಅಡಿ, ಇನ್ನು ಕೆಲವು ಕಡೆ 27 ಹಾಗೂ 30 ಅಡಿ ಅಗಲದಲ್ಲಿ ರಸ್ತೆ ನಿರ್ಮಿಸಲಾಗುತ್ತಿದೆ ಎಂದು ಸ್ಥಳೀಯರು ಆಕ್ಷೇಪಿಸಿದ್ದಾರೆ. ರಸ್ತೆ ಅಗಲದಲ್ಲಿ ವ್ಯತ್ಯಾಸ ಕಂಡುಬರುತ್ತಿರುವುದಕ್ಕೆ ಅನುಮೋದಿತ ಯೋಜನೆ, ತಾಂತ್ರಿಕ ನಕ್ಷೆ ಅಥವಾ ಸ್ಥಳದ ವಾಸ್ತವಿಕ ಪರಿಸ್ಥಿತಿಗಳು ಕಾರಣವೇ ಎಂಬುದನ್ನು ಪಾಲಿಕೆ ಇಂಜಿನಿಯರ್‌ಗಳು ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ ಎಷ್ಟು ಜಾಗ ಅಗತ್ಯವಿದೆ, ಒತ್ತುವರಿ ತೆರವುಗೊಳಿಸುವ ಮಾನದಂಡಗಳೇನು ಹಾಗೂ ಕಾಮಗಾರಿಗಳ ಅಳತೆಗಳನ್ನು ಯಾವ ಆಧಾರದ ಮೇಲೆ ನಿಗದಿಪಡಿಸಲಾಗಿದೆ ಎಂಬ ಮಾಹಿತಿಯನ್ನು ಸಾರ್ವಜನಿಕರಿಗೆ ನೀಡಬೇಕು. ಕಾಮಗಾರಿ ಆರಂಭಿಸುವ ಮುನ್ನವೇ ಸ್ಥಳ ಪರಿಶೀಲನೆ ನಡೆಸಿ, ಸ್ಥಳೀಯರಿಗೆ ಅಗತ್ಯ ಮಾಹಿತಿ ಒದಗಿಸಬೇಕಿತ್ತು ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ.





**ಇಂಜಿನಿಯರ್‌ಗಳು, ಗುತ್ತಿಗೆದಾರರ ಹೊಣೆಗಾರಿಕೆ ಏನು? :**

ಸರ್ಕಾರದ ಅನುದಾನದಲ್ಲಿ ನಡೆಯುವ ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟ, ಅಳತೆ ಹಾಗೂ ಅನುದಾನದ ಸಮರ್ಪಕ ಬಳಕೆಯನ್ನು ಖಚಿತಪಡಿಸುವುದು ಸಂಬಂಧಪಟ್ಟ ಅಧಿಕಾರಿಗಳು ಮತ್ತು ಇಂಜಿನಿಯರ್‌ಗಳ ಜವಾಬ್ದಾರಿಯಾಗಿದೆ. ಆದರೆ, ಕಾಮಗಾರಿಗಳಲ್ಲಿ ಲೋಪಗಳಾಗುತ್ತಿವೆ ಎಂಬ ಆರೋಪಗಳು ಕೇಳಿಬರುತ್ತಿರುವ ಹಿನ್ನೆಲೆಯಲ್ಲಿ ಇಂಜಿನಿಯರ್‌ಗಳು ಮತ್ತು ಗುತ್ತಿಗೆದಾರರ ಹೊಣೆಗಾರಿಕೆಯನ್ನು ಪರಿಶೀಲಿಸಬೇಕೆಂಬ ಒತ್ತಾಯ ಕೇಳಿಬಂದಿದೆ.

ಕಾಮಗಾರಿಗಳಲ್ಲಿ ಕಳಪೆ ಗುಣಮಟ್ಟ ಅಥವಾ ಹಣದ ದುರುಪಯೋಗ ನಡೆದಿದ್ದರೆ, ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಈ ಆರೋಪಗಳ ಸತ್ಯಾಸತ್ಯತೆ ಪರಿಶೀಲಿಸಲು ತಾಂತ್ರಿಕ ಅಧಿಕಾರಿಗಳಿಂದ ಸ್ಥಳ ಪರಿಶೀಲನೆ ಮತ್ತು ಕಾಮಗಾರಿಗಳ ಗುಣಮಟ್ಟದ ಪರೀಕ್ಷೆ ನಡೆಸುವುದು ಅಗತ್ಯವಾಗಿದೆ.

**ಸರ್ಕಾರದ ಕಾಮಗಾರಿಗಳಲ್ಲಿ ವಾರ್ಡ್ ಸದಸ್ಯರ ಹಸ್ತಕ್ಷೇಪ ಎಷ್ಟು ಸರಿ?**

ಸರ್ಕಾರದ ಅನುದಾನದಲ್ಲಿ ನಡೆಯುವ ಕಾಮಗಾರಿಗಳಲ್ಲಿ ವಾರ್ಡ್ ಸದಸ್ಯರ ಪಾತ್ರ ಮತ್ತು ಅಧಿಕಾರಗಳ ವ್ಯಾಪ್ತಿ ಏನು ಎಂಬ ಪ್ರಶ್ನೆಯನ್ನೂ ಸ್ಥಳೀಯರು ಎತ್ತಿದ್ದಾರೆ. ಜನಪ್ರತಿನಿಧಿಗಳು ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಸಾರ್ವಜನಿಕರ ಅಹವಾಲುಗಳನ್ನು ಅಧಿಕಾರಿಗಳ ಗಮನಕ್ಕೆ ತರುವುದು ಮತ್ತು ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಅಗತ್ಯ. ಆದರೆ, ಕಾಮಗಾರಿಗಳ ತಾಂತ್ರಿಕ ನಿರ್ಧಾರಗಳು ಹಾಗೂ ಅನುಷ್ಠಾನದಲ್ಲಿ ನಿಯಮಬಾಹಿರ ಹಸ್ತಕ್ಷೇಪ ನಡೆಯುತ್ತಿದೆಯೇ ಎಂಬುದನ್ನು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಬೇಕು ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

ನಗರದ ವಿವಿಧ ವಾರ್ಡ್‌ಗಳಲ್ಲಿ ಇಂತಹ ಸಮಸ್ಯೆಗಳು ಎದುರಾಗುತ್ತಿವೆ ಎಂಬ ಆರೋಪಗಳಿರುವುದರಿಂದ, ಮಹಾನಗರ ಪಾಲಿಕೆ ಆಡಳಿತವು ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದ ನಿಯಮಗಳು, ಅನುಮೋದಿತ ನಕ್ಷೆಗಳು ಮತ್ತು ಹೊಣೆಗಾರಿಕೆಗಳ ಕುರಿತು ಸ್ಪಷ್ಟನೆ ನೀಡಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

**ನ್ಯಾಯಾಲಯದ ಮೊರೆ ಹೋಗುವ ಎಚ್ಚರಿಕೆ :** ವಾರ್ಡ್ 9ರ ರಸ್ತೆ ಮತ್ತು ಚರಂಡಿ ಕಾಮಗಾರಿಗಳ ಕುರಿತು ಉಂಟಾಗಿರುವ ಗೊಂದಲವನ್ನು ಕಾಲಮಿತಿಯೊಳಗೆ ಬಗೆಹರಿಸದಿದ್ದರೆ ನ್ಯಾಯಾಲಯದ ಮೊರೆ ಹೋಗಿ ಕಾಮಗಾರಿಗಳಿಗೆ ತಡೆಯಾಜ್ಞೆ ಪಡೆಯಲು ಮುಂದಾಗಬೇಕಾಗುತ್ತದೆ ಎಂದು ಸ್ಥಳೀಯರು ಎಚ್ಚರಿಸಿದ್ದಾರೆ. ಇದರಿಂದ ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಳ್ಳುವುದರ ಜೊತೆಗೆ ಸಾರ್ವಜನಿಕರ ಹಣ ಮತ್ತು ಸರ್ಕಾರದ ಅನುದಾನ ವ್ಯರ್ಥವಾಗುವ ಸಾಧ್ಯತೆಯೂ ಇದೆ ಎಂಬ ಆತಂಕ ವ್ಯಕ್ತವಾಗಿದೆ.

ಒಟ್ಟಿನಲ್ಲಿ, ಬಳ್ಳಾರಿ ಮಹಾನಗರ ಪಾಲಿಕೆಯ ಸಂಬಂಧಪಟ್ಟ ಅಧಿಕಾರಿಗಳು, ಇಂಜಿನಿಯರ್‌ಗಳು ಮತ್ತು ತಾಂತ್ರಿಕ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ರಸ್ತೆ ಅಗಲ, ಚರಂಡಿ ನಿರ್ಮಾಣ, ಒತ್ತುವರಿ ತೆರವು, ಕಾಮಗಾರಿಗಳ ಗುಣಮಟ್ಟ ಹಾಗೂ ಅನುದಾನದ ಬಳಕೆಯನ್ನು ಪರಿಶೀಲಿಸಬೇಕು. ಅನುಮೋದಿತ ಯೋಜನೆ ಮತ್ತು ನಿಯಮಗಳ ಪ್ರಕಾರ ಕಾಮಗಾರಿಗಳು ನಡೆಯುತ್ತಿವೆಯೇ ಎಂಬುದನ್ನು ಖಚಿತಪಡಿಸಿ, ಆರೋಪಗಳಿಗೆ ಪಾರದರ್ಶಕವಾಗಿ ಉತ್ತರಿಸಬೇಕು. ಯಾವುದೇ ತಾರತಮ್ಯವಿಲ್ಲದೆ ಸಾರ್ವಜನಿಕರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಮೂಲಕ ಜನರಲ್ಲಿನ ಗೊಂದಲಕ್ಕೆ ತೆರೆ ಎಳೆಯಬೇಕಿದೆ.

# ರಸ್ತೆ ಅಪಘಾತ: ಇಬ್ಬರು ಸಾವು

**ಕಲಬುರಗಿ:** ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯ ಶಹಾಬಾದ ರಿಂಗ್ ರೋಡ್ ಕಡೆಯಿಂದ ನಂದೂರ ಕಡೆಗೆ ಹೋಗುವ ರಸ್ತೆ ಮತ್ತು ನಗರದ ಶ್ರೀರಾಮ ಯಾರ್ಡ್ ಹತ್ತಿರ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟಿದ್ದಾರೆ. ಶಹಾಬಾದ ರಿಂಗ್ ರೋಡ್ ಕಡೆಯಿಂದ ನಂದೂರ ಕಡೆಗೆ ಹೋಗುವ ರಸ್ತೆಯಲ್ಲಿ ರಸ್ತೆ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ 50–60 ವರ್ಷ ವಯಸ್ಸಿನ ಅಪರಿಚಿತ ವ್ಯಕ್ತಿಗೆ ಯಾವುದೋ ವಾಹನ ಡಿಕ್ಕಿ ಹೊಡೆದು ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ. ಮೃತ ವ್ಯಕ್ತಿ 5 ಅಡಿ 6 ಇಂಚು ಎತ್ತರವಿದ್ದು, ನೆಹರು ಶರ್ಟ್ ಮತ್ತು ಬಿಳಿ ಬಣ್ಣದ ಪ್ಯಾಂಟ್ ಧರಿಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಗುಬ್ಬಿ ಕಾಲೋನಿಯ ಆನಂದ ವಾಘಮೋರೆ ಎಂಬುವವರು ಈ ಬಗ್ಗೆ ಸಂಚಾರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ಇನ್ನೊಂದು ಪ್ರಕರಣದಲ್ಲಿ ಚಿತ್ತಾಪುರದಿಂದ ಕಲಬುರಗಿ ಕಡೆಗೆ ಮಗ–ತಾಯಿ ಬೈಕ್ ಮೇಲೆ ಬರುತ್ತಿದ್ದಾಗ ಶ್ರೀರಾಮ ಯಾರ್ಡ್ ಹತ್ತಿರ ಜಂಪ್‌ನಲ್ಲಿ ತಾಯಿ ಬೈಕ್ ಮೇಲಿಂದ ಬಿದ್ದು, ಗಂಭೀರವಾಗಿ ಗಾಯಗೊಂಡಿದ್ದರು.

### ಬಳ್ಳಾರಿ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಕೆ. ಮಲ್ಲಿಕಾರ್ಜುನ್ ಅಧಿಕಾರ ಸ್ವೀಕಾರ

# ಕಾರ್ಯಕರ್ತರ ಸೇವೆಯೇ ನನ್ನ ಆದ್ಯತೆ: ಕೆ. ಮಲ್ಲಿಕಾರ್ಜುನ್

**ಹೊಸಪೇಟೆ ಧ್ವನಿ ನ್ಯೂಸ್ :**

ಬಳ್ಳಾರಿ : ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬಳ್ಳಾರಿ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಕೆ. ಮಲ್ಲಿಕಾರ್ಜುನ್ ಅವರ ಜವಾಬ್ದಾರಿ ಸ್ವೀಕಾರ ಕಾರ್ಯಕ್ರಮ ನಡೆಯಿತು.

ಕೆಪಿಸಿಸಿ ಮಾಜಿ ಅಧ್ಯಕ್ಷ ಅಲ್ಲಂ ವೀರಭದ್ರಪ್ಪ ಹಾಗೂ ಕೆಪಿಸಿಸಿ ಉಪಾಧ್ಯಕ್ಷ ಎ.ಆರ್.ಎಂ. ಹುಸೇನ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ, ಎರಡನೇ ಬಾರಿಗೆ ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾಗಿ ಆಯ್ಕೆಯಾದ ಅಲ್ಲಂ ಪ್ರಶಾಂತ್ ಹಾಗೂ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷ ಕೆ. ಮಲ್ಲಿಕಾರ್ಜುನ್ ಅವರಿಗೆ ಪಕ್ಷದ ಬಾವುಟ ನೀಡಿ ಹಸ್ತಾಂತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಹಿರಿಯ ನಾಯಕರು, ಬಳ್ಳಾರಿ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸಬೇಕು.



ನಿಷ್ಠಾವಂತ ಕಾರ್ಯಕರ್ತರನ್ನು ಗುರುತಿಸಿ, ತಳಮಟ್ಟದಿಂದ ಪಕ್ಷವನ್ನು ಸಂಘಟಿಸುವ ಮೂಲಕ ಮುಂಬರುವ ಚುನಾವಣೆಗಳಿಗೆ ಸಜ್ಜಾಗಬೇಕು ಎಂದು ಕರೆ ನೀಡಿದರು. ನೂತನ ಅಧ್ಯಕ್ಷರಿಗೆ ಶುಭ ಹಾರೈಸಿದರು.

ಕಾರ್ಯಕರ್ತರ ಸೇವೆಯೇ ನನ್ನ ಆದ್ಯತೆ

ನೂತನ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಮಲ್ಲಿಕಾರ್ಜುನ್ ಮಾತನಾಡಿ, ಅಧ್ಯಕ್ಷ ಸ್ಥಾನವು ಅಧಿಕಾರವಲ್ಲ, ಬದಲಾಗಿ ಕಾರ್ಯಕರ್ತರ ಸೇವೆ ಮಾಡುವ ಜವಾಬ್ದಾರಿಯಾಗಿದೆ. ಪಕ್ಷದ ನಿಜವಾದ ಶಕ್ತಿಯಾಗಿರುವ ಕಾರ್ಯಕರ್ತರ ಕಷ್ಟ–ಸುಖಗಳಿಗೆ ಸ್ಪಂದಿಸಿ, ಅವರ ಗೌರವ ಮತ್ತು ನಿಷ್ಠೆಗೆ ಮನ್ನಣೆ ನೀಡುವುದಾಗಿ ತಿಳಿಸಿದರು.

ಹಿರಿಯರ ಮಾರ್ಗದರ್ಶನ, ಯುವಕರ ಉತ್ಸಾಹ ಹಾಗೂ ಮಹಿಳೆಯರ ಸಕ್ರಿಯ ಭಾಗವಹಿಸುವಿಕೆಯೊಂದಿಗೆ ಬಳ್ಳಾರಿ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿಯನ್ನು ರಾಜ್ಯದಲ್ಲೇ ಮಾದರಿ ಸಂಘಟನೆಯನ್ನಾಗಿ ರೂಪಿಸುವುದಾಗಿ ಭರವಸೆ ನೀಡಿದರು.

ಮುಂಬರುವ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಈಗಿನಿಂದಲೇ ಸಿದ್ಧತೆ ನಡೆಸಿ, ಪಕ್ಷದ ಸಮರ್ಥ ಅಭ್ಯರ್ಥಿಗಳನ್ನು ಗೆಲ್ಲಿಸುವುದು ತಮ್ಮ ಆದ್ಯತೆಯಾಗಿದೆ ಎಂದರು.

2028ರ ಕರ್ನಾಟಕ ವಿಧಾನಸಭೆ ಚುನಾವಣೆ ಹಾಗೂ 2029ರ ಲೋಕಸಭೆ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ತಳಮಟ್ಟದಿಂದ ಪಕ್ಷವನ್ನು ಬಲಪಡಿಸಲಾಗುವುದು. ರಾಹುಲ್ ಗಾಂಧಿ ಅವರನ್ನು ಪ್ರಧಾನಮಂತ್ರಿಯನ್ನಾಗಿ ಮಾಡುವ ಗುರಿಯೊಂದಿಗೆ ಕಾರ್ಯಕರ್ತರು ಸಂಘಟಿತವಾಗಿ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯ ಕೆ.ಎಸ್.ಎಲ್. ಸ್ವಾಮಿ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಮಾನಯ್ಯ, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀನಿವಾಸುಲು, ಕರಿಬಸಪ್ಪ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಚಿದಾನಂದಪ್ಪ, ಮುಂಚೂಣಿ ಘಟಕಗಳ ಅಧ್ಯಕ್ಷರಾದ ಎರಕುಲ ಸ್ವಾಮಿ, ಕನೇಕಲ್ ಮೆಹಬೂಬ್ ಸಾಬ್, ಮುರಾರ್ಜಿ ರೆಡ್ಡಿ, ಮಂಜುಳಾ, ಶೇಕ್ ಅಫಾಕ್ ಹುಸೇನ್, ಅಲಿವೇಲು, ಸುರೇಶ್, ಅತ್ತವುಲ್ಲ, ಮಂಜುನಾಥ್, ಕೆಪಿಸಿಸಿ ವಕ್ತಾರ ವೆಂಕಟೇಶ್ ಹೆಗಡೆ ಸೇರಿದಂತೆ ಹಲವು ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿ ನೂತನ ಅಧ್ಯಕ್ಷರಿಗೆ ಶುಭ ಹಾರೈಸಿದರು.

# ಪೊಲೀಸ್ ಮತ್ತು ರೈಲ್ವೆ ಪೊಲೀಸ್ ಇಲಾಖೆ ಭರ್ಜರಿ ಕಾರ್ಯಾಚರಣೆ

## ಮದ್ಯ, ಮಾದಕ ವಸ್ತುಗಳ ಸೇವನೆ, ಸಾಗಾಟ 27 ಪ್ರಕರಣ ದಾಖಲು, 97.8 ಕೆ.ಜಿ ಗಾಂಜಾ ವಶ

**ಹೊಸಪೇಟೆ ಧ್ವನಿ ನ್ಯೂಸ್ :**

**ವಿಜಯನಗರ (ಹೊಸಪೇಟೆ) :** ವಿವಿಧ ರೀತಿ ಮದ್ಯ, ಮಾದಕ ವಸ್ತುಗಳ ವಿರುದ್ಧ ಭರ್ಜರಿ ಕಾರ್ಯಾಚರಣೆ ನಡೆಸಿದ ಪೊಲೀಸ್ ಇಲಾಖೆ ಮತ್ತು ರೈಲ್ವೇ ಪೊಲೀಸ್ ಇಲಾಖೆ 5.8 ಕೆಜಿ ಮತ್ತು ನೆರೆ ರಾಜ್ಯಗಳಿಂದ ರೈಲ್ವೆ ಮೂಲಕ ಸಾಗಿಸಲಾಗುತ್ತಿದ್ದ 92 ಕೆಜಿ ಗಾಂಜಾ ಸೇರಿ ಒಟ್ಟು 97.8 ಕೆ.ಜಿ ಗಾಂಜಾವನ್ನು ವಶಪಡಿಸಿಕೊಂಡಿದ್ದು, ಈ ಸಂಬಂಧ ಒಟ್ಟು 27 ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್, ಮನ್ನಿಕೇರಿ ಮಾಹಿತಿ ನೀಡಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ನಾರ್ಕೋಟಿಕ್ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರಸಕ್ತ ಸಾಲಿನಲ್ಲಿ ಒಟ್ಟು 27 ಪ್ರಕರಣ ದಾಖಲಾಗಿದ್ದು, ಅದರಲ್ಲಿ 9 ಮಾದಕ ವಸ್ತು ಮಾರಾಟ ಪ್ರಕರಣ, 18 ಮಾದಕ ವಸ್ತು ಸೇವನೆಗೆ ಸಂಬಂಧಿಸಿದ.ತೆ ಒಟ್ಟು 13 ಆರೋಪಿಗಳ ಮೇಲೆ ಈಗಾಗಲೇ ಕಾನೂನು ಕ್ರಮ ಜರುಗಿಸಲಾಗಿದೆ. ಅಕ್ಟೋಬರ್ ಮಾಹೆ ಒಂದರಲ್ಲೇ 2 ಮಾದಕ ವಸ್ತು ಪ್ರಕರಣಗಳು ದಾಖಲಾಗಿದ್ದು, ಎರಡೂ ಪ್ರಕರಣಗಳಿಗೂ ಕೂಡಲೇ ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ಈ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ಮಾದಕ ವಸ್ತುಗಳ ಸೇವನೆ ಮತ್ತು ಸಾಗಾಟ–ಕ್ಕೆ ಕಡಿವಾಣ ಹಾಕಲು ಶಾಲಾ–ಕಾಲೇಜುಗಳು ಹಾಗೂ ವಸತಿ ನಿಲಯಗಳಲ್ಲಿ, ಜನನಿಬಿಡ ಸಾರ್ವಜನಿಕ ಪ್ರದೇಶಗಳಲ್ಲಿ ನಿರಂತರವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಅಧಿಕಾರಿಗಳು ಸೂಚಿಸಿದರು.

ಶಾಲಾ–ಕಾಲೇಜುಗಳು ಹಾಗೂ ವಸತಿ ನಿಲಯಗಳಲ್ಲಿ ಮಾದಕ ವಸ್ತುಗಳು ಮತ್ತು ಮದ್ಯ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಬೇಕು. ಶಾಲಾ ಕಾಲೇಜಿಗೆ ಬರುವ ಮಕ್ಕಳ ನಡವಳಿಕೆಯಲ್ಲಿ ಬದಲಾವಣೆ, ಮಂಕು ಅಥವಾ ಅನುಮಾನಾಸ್ಪದ ಚಟುವಟಿಕೆಗಳು ಕಂಡುಬಂದಲ್ಲಿ ಹೆಚ್ಚಿನ ನಿಗಾ ವಹಿಸಬೇಕು. ಒಂದು ವೇಳೆ ಗಾಂಜಾ, ಡ್ರಗ್ಸ್ ಇನ್ನಿತರೆ ಮಾದಕ ವಸ್ತುಗಳ ಸೇವನೆಗೆ ಬಲಿಯಾಗಿದ್ದಲ್ಲಿ ಸೂಕ್ತ ಸಲಹೆ ಮತ್ತು ಮಾರ್ಗದರ್ಶನ ನೀಡಬೇಕು ಎಂದು ಸೂಚಿಸಿದರು.

ರೈತರು ತಮ್ಮ ಕೃಷಿ ಜಮೀನುಗಳಲ್ಲಿ ಅಕ್ರಮವಾಗಿ ಗಾಂಜಾ ಅಥವಾ ನಿಷೇಧಿತ ಬೆಳೆ ಬೆಳೆಯದಂತೆ ತಡೆಯಲು ಅಗತ್ಯವಿರುವ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕು. ಕಾಡಂಚಿನ ಗ್ರಾಮಗಳ ಗ್ರಾಮಸ್ಥರಿಗೆ ಮಾದಕ ದ್ರವ್ಯಗಳ ಸೇವನೆಯ ದುಷ್ಪರಿಣಾಮ ಮತ್ತು ಅರಣ್ಯ ಪ್ರದೇಶದಲ್ಲಿ ಯಾವುದೇ ನಿಷೇಧಿತ ಬೆಳೆಗಳು ಬೆಳೆಯದಂತೆ ನಿರ್ದೇಶನ ನೀಡಬೇಕು. ವೈದ್ಯರ ಸಲಹೆ ಮತ್ತು ಸೂಚನೆ ಇಲ್ಲದೆ ಔಷಧಗಳನ್ನು ವಿತರಿಸಬಾರದು. ಅಂಚೆ ಮತ್ತು ಇತರೆ ಆನ್‌ಲೈನ್ ಸೇವೆ ಇಲಾಖೆಯ ಮೂಲಕ ರವಾನೆಯಾಗುವ ಪಾರ್ಸಲ್‌ಗಳು ಹಾಗೂ ಉತ್ಪನ್ನಗಳ ಕುರಿತು ಅನುಮಾನ ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಮಾದಕ ವಸ್ತುಗಳ ಸಾಗಾಟ ಅಥವಾ ಸೇವನೆಗೆ ಸಂಬಂಧಿಸಿದ ಅನುಮಾನಾಸ್ಪದ ಚಟುವಟಿಕೆಗಳ ಬಗ್ಗೆ ಸಾರ್ವಜನಿಕರು ಮಾಹಿತಿ ನೀಡಬಹುದು. ಮಾಹಿತಿ ನೀಡುವವರ ಗುರುತನ್ನು ಗೌಪ್ಯವಾಗಿಡಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ, ಅರಣ್ಯ ಇಲಾಖೆ ಉಪಸಂರಕ್ಷಣಾಧಿಕಾರಿ ಅನುಪಮ, ಅಪರ ಜಿಲ್ಲಾಧಿಕಾರಿ ಪಿ.ಎನ್. ಲೋಕೇಶ್ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಕೂಡ್ಲಿಗಿ: ಪುರದೇವಿ ಶ್ರೀ ಊರಮ್ಮ ದೇವಿ ದೇವಸ್ಥಾನದಲ್ಲಿ ನವರಾತ್ರಿ ಉತ್ಸವ ನಿಮಿತ್ತ ಶ್ರೀದೇವಿ ಮಹಾತ್ಮೆ ಪುರಾಣ ಪ್ರವಚನ



**ಹೊಸಪೇಟೆ ಧ್ವನಿ ನ್ಯೂಸ್ :**

**ಕೂಡ್ಲಿಗಿ :** ಪುರದೇವಿ ಶ್ರೀ ಊರಮ್ಮ ದೇವಿ ದೇವಸ್ಥಾನದಲ್ಲಿ ಶ್ರೀ ಊರಮ್ಮದೇವಿ ಸೇವಾ ಸಮಿತಿ, ಆಯಗಾರರು ಮತ್ತು ಸಮಸ್ತ ದೈವಸ್ಥರ ಸಹಯೋಗದಲ್ಲಿ ನವರಾತ್ರಿ ಉತ್ಸವ ಹಾಗೂ ದಸರಾ ಹಬ್ಬದ ಪ್ರಯುಕ್ತ ನಿತ್ಯ ರಾತ್ರಿ ಶ್ರೀದೇವಿ ಮಹಾತ್ಮೆ ಪುರಾಣ ಪ್ರವಚನ ಶ್ರವಣ ಕಾರ್ಯಕ್ರಮ ಆಯೋಜಿಸಲಾಗಿದೆ.

ದಸರಾ ಅಮಾವಾಸ್ಯೆಯ ಮರುದಿನದಿಂದ ಕೂಡ್ಲಿಗಿ ಹಿರೇಮಠದ ಜಂಗಮ ಹಿರಿಯರಾದ ಚಿದಾನಂದಯ್ಯ ಅವರ ನೇತೃತ್ವದಲ್ಲಿ ನಿತ್ಯ ರಾತ್ರಿ ಪುರಾಣ ಪ್ರವಚನ ಧಾರ್ಮಿಕ ವಿಧಿವಿಧಾನಗಳೊಂದಿಗೆ ಶ್ರದ್ಧಾ ಭಕ್ತಿಯಿಂದ ಜರುಗುತ್ತಿದೆ.

ಪ್ರವಚನಕಾರರು ಮತ್ತು ಅರ್ಚಕರಾದ ಬಡಿಗೇರ ನಾಗರಾಜ ಆಚಾರಿ ಹಾಗೂ ಪ್ರವಚನಕಾರರು ಸಂಗೀತ ಕಲಾವಿದರಾದ ಅಗಸಕಟ್ಟೆ ತಿಂದಪ್ಪ ಅವರ ಸಹಭಾಗಿತ್ವದಲ್ಲಿ ವಿವಿಧ ವಾದ್ಯವೃಂದಗಳೊಂದಿಗೆ ಕಾರ್ಯಕ್ರಮ ನಡೆಯುತ್ತಿದೆ.

ಪಟ್ಟಣದ ನಾಗರಿಕರು, ಮಹಿಳೆಯರು, ಆಸ್ತಿಕರು, ಮುತ್ತೈದೆಯರು ಸಕ್ರಿಯವಾಗಿ ಭಾಗಿ ಮಡಿಮುಡಿಯೊಂದಿಗೆ ಶ್ರದ್ಧೆಯಿಂದ ಪುರಾಣ ಶ್ರವಣ ಮಾಡಿದರು. ಭಕ್ತರಿಗೆ ಗ್ರಾಮದೇವತೆ ಭಕ್ತರು ಸರದಿಯ ಪ್ರಕಾರ ಪ್ರಸಾದ ವ್ಯವಸ್ಥೆ ಮಾಡಿದ್ದರು. ಪ್ರತಿದಿನ ಬೆಳ್ಳಂಬೆಳಗ್ಗ ಮುತ್ತೈದೆಯರು ಶಮೀವೃಕ್ಷದ ಬಳಿ ತೆರಳಿ ಶ್ರೀ ಬನ್ನಿಮಹಾಂಕಾಳಿಯನ್ನು ಪೂಜಿಸಿ ದೇವಿಯ ಕೃಪೆಗೆ ಪಾತ್ರರಾದರು.

# ಅಡವಿ ಆನಂದ ದೇವನಹಳ್ಳಿಯಲ್ಲಿ ರಂಗಮಂದಿರ ಜಾಗ ಒತ್ತುವರಿ –ತೆರವಿಗೆ ಗ್ರಾಮಸ್ಥರ ಆಗ್ರಹ

**ಹಗರಿಬೊಮ್ಮನಹಳ್ಳಿ :** ತಾಲೂಕಿನ ಅಡವಿ ಆನಂದ ದೇವನಹಳ್ಳಿಯಲ್ಲಿ ಸಾರ್ವಜನಿಕ ಶ್ರೀ ಪಕ್ಕೀರಸ್ವಾಮಿ ಹಾಗೂ ರಂಗಮಂದಿರದ ನಿವೇಶನವನ್ನು ಖಾಸಗಿ ವ್ಯಕ್ತಿ ಒತ್ತುವರಿ ಮಾಡಿಕೊಂಡಿದ್ದು, ಕೂಡಲೇ ತೆರವುಗೊಳಿಸಬೇಕು ಎಂದು ಒತ್ತಾಯಿಸಿ ಗ್ರಾಮಸ್ಥರು ಹಾಗೂ ಶ್ರೀ ಯಳಕಲ್ ಬಸವೇಶ್ವರ ಸೇವಾ ಸಮಿತಿಯಿಂದ ಶುಕ್ರವಾರ ತಹಸೀಲ್ದಾರ್ ಮತ್ತು ತಾ.ಪಂ. ಇಒಗೆ ಮನವಿ ಸಲ್ಲಿಸಲಾಯಿತು.

ಸೇವಾ ಸಮಿತಿ ಅಧ್ಯಕ್ಷ ಕೆ.ಶಿವಣ್ಣ ಮತ್ತು ಪ್ರಮುಖರಾದ ಎಚ್.ಶೇಖರಪ್ಪ ಮಾತನಾಡಿ, ಈ ನಿವೇಶನವನ್ನು ಸುಮಾರು 70 ವರ್ಷಗಳಿಂದ ಸಾರ್ವಜನಿಕ ಉಪಯೋಗಕ್ಕಾಗಿ ಕಾಪಾಡಿಕೊಂಡು ಬಂದಿದ್ದೇವೆ. ಪಕ್ಕೀರಸ್ವಾಮಿ ಮತ್ತು ರಂಗಮಂದಿರದ ನಡುವಿನ ಜಾಗದಲ್ಲಿ ವ್ಯಕ್ತಿಯೊಬ್ಬ ದನದ ಕೊಟ್ಟಿಗೆ ಕಟ್ಟಲು ಮುಂದಾಗಿದ್ದಾನೆ. ಸ್ಥಳ ಪರಿಶೀಲಿಸಿ ಒತ್ತುವರಿ ತೆರವುಗೊಳಿಸಬೇಕು ಎಂದರು.

ಈ ಬಗ್ಗೆ ಬಾಚಿಗೊಂಡನಹಳ್ಳಿ ಗ್ರಾ.ಪಂ.ಗೆ ದೂರು ನೀಡಿ–ದರೂ ಪ್ರಯೋಜನವಾಗಿಲ್ಲ. ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಕಚೇರಿ ಮುಂದೆ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಉಪ ತಹಸೀಲ್ದಾರ್ ಶಿವಕುಮಾರಗೌಡ ಮನವಿ ಸ್ವೀಕರಿಸಿ ಮೇಲಾಧಿಕಾರಿಗಳ ಗಮನಕ್ಕೆ ತರುವುದಾಗಿ ತಿಳಿಸಿದರು.

ಈ ವೇಳೆ ಸೇವಾ ಸಮಿತಿಯ ಕೆ.ಶಿವಣ್ಣ, ಎಚ್.ಶೇಖರಪ್ಪ, ಎ.ಜಿ.ಶಾಂತ ರಾಜ್, ಅಂಜಿನಪ್ಪ, ಎಚ್.ಪ್ರಕಾಶಗೌಡ, ವೈ. ಮಹಾದೇವಪ್ಪ, ಟಿ.ಹುಲುಗಪ್ಪ ಮತ್ತಿತರರು ಇದ್ದರು.



# ಕೂಡ್ಲಿಗಿ ಬಸ್ ನಿಲ್ದಾಣದಲ್ಲಿ ಹೆಚ್‌ಐವಿ ಕುರಿತು ಜಾಗೃತಿ ಅಭಿಯಾನ




**ಹೊಸಪೇಟೆ ಧ್ವನಿ ನ್ಯೂಸ್ :**

**ಕೂಡ್ಲಿಗಿ :** ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಸಾರ್ವಜನಿಕರಿಗೆ ಎಚ್‌ಐವಿ/ಏಡ್ಸ್ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಅಂಗವಾಗಿ ಬಸ್ ನಿಲ್ದಾಣ–ಕ್ಕೆ ಆಗಮಿಸುವ ಪ್ರಯಾಣಿಕರು ಹಾಗೂ ಸಾರ್ವಜನಿಕರಿಗೆ ಎಚ್‌ಐವಿ ಸೋಂಕು ಹರಡುವ ವಿಧಾನಗಳು, ಸೋಂಕು ತಡೆಗಟ್ಟುವ ಮುನ್ನೆಚ್ಚರಿಕೆ ಕ್ರಮಗಳು ಮತ್ತು ನಿಯಮಿತ ಆರೋಗ್ಯ ತಪಾಸಣೆಯ ಮಹತ್ವದ ಕುರಿತು ಮಾಹಿತಿ ನೀಡಲಾಯಿತು.

ಎಚ್‌ಐವಿ ಸೋಂಕಿನ ಬಗ್ಗೆ ಜನರಲ್ಲಿ ಇರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಿ, ವೈಜ್ಞಾನಿಕ ಅರಿವು ಮೂಡಿಸುವ ಉದ್ದೇಶದಿಂದ ಜಾಗೃತಿ ಅಭಿಯಾನ ನಡೆಸಲಾಯಿತು.

ಎಚ್‌ಐವಿ ಸೋಂಕನ್ನು ತಡೆಗಟ್ಟಲು ಪ್ರತಿಯೊಬ್ಬರೂ ಅಗತ್ಯ ಮುನ್ನೆಚ್ಚರಿಕೆಗಳನ್ನು ಪಾಲಿಸಬೇಕು. ಸೋಂಕಿನ ಬಗ್ಗೆ ಅನುಮಾನವಿದ್ದಲ್ಲಿ ಆರೋಗ್ಯ ಕೇಂದ್ರಗಳಲ್ಲಿ ಪರೀಕ್ಷೆ ಮಾಡಿಸಿಕೊಳ್ಳಬೇಕು. ಆರಂಭಿಕ ಹಂತದಲ್ಲಿಯೇ ಸೋಂಕು ಪತ್ತೆಹಚ್ಚಿ ಸೂಕ್ತ ವೈದ್ಯಕೀಯ ಚಿಕಿತ್ಸೆ ಪಡೆಯುವುದರಿಂದ ಆರೋಗ್ಯವನ್ನು ಕಾಪಾಡಿ ಕೊಳ್ಳಬಹುದು ಎಂದು ಜಾಗೃತಿ ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ಎಚ್‌ಐವಿ ಸೋಂಕಿತರ ಬಗ್ಗೆ ಸಮಾಜದಲ್ಲಿ ತಾರತಮ್ಯ ತೋರದೆ, ಅವರೊಂದಿಗೆ ಗೌರವಯುತವಾಗಿ ನಡೆದು ಕೊಳ್ಳಬೇಕು. ಸೋಂಕಿತರನ್ನು ಕೀಳಾಗಿ ಕಾಣದೆ, ಅವರಿಗೆ ಮಾನವೀಯತೆ ಮತ್ತು ಸಹಾನುಭೂತಿಯಿಂದ ಬೆಂಬಲ ನೀಡಬೇಕು ಎಂಬ ಸಂದೇಶವನ್ನು ಸಾರ್ವಜನಿಕರಿಗೆ ತಿಳಿಸಲಾಯಿತು.

ಸಾರ್ವಜನಿಕ ಸ್ಥಳಗಳಲ್ಲಿ ಇಂತಹ ಜಾಗೃತಿ ಕಾರ್ಯ ಕ್ರಮಗಳನ್ನು ಆಯೋಜಿ ಸುವುದರಿಂದ ಜನರಲ್ಲಿ ಆರೋಗ್ಯದ ಬಗ್ಗೆ ಅರಿವು ಹೆಚ್ಚುವುದರ ಜೊತೆಗೆ ಎಚ್‌ಐವಿ/ಏಡ್ಸ್ ನಿಯಂತ್ರಣಕ್ಕೆ ಸಹಕಾರಿಯಾಗಲಿದೆ ಎಂಬ ಆಶಯ ವ್ಯಕ್ತಪಡಿಸಲಾಯಿತು.

# ದಸರಾ ಸಿಎಂ ಕಪ್ ಕ್ರೀಡಾಕೂಟದಲ್ಲಿ ವಿಜಯನಗರ ಜಿಲ್ಲಾ ಕುಂಗ್–ಫು ವುಶು ಕ್ರೀಡಾಪಟುಗಳ ಸಾಧನೆ–12 ಪದಕಗಳಿಗೆ ಮುತ್ತು

**ಹೊಸಪೇಟೆ ಧ್ವನಿ ನ್ಯೂಸ್ :**

**ಹೊಸಪೇಟೆ :** ಅಕ್ಟೋಬರ್ 11ರಿಂದ ಮೈಸೂರಿನಲ್ಲಿ ಆರಂಭವಾದ ರಾಜ್ಯಮಟ್ಟದ ದಸರಾ ಅಒ ಕಪ್ ಕ್ರೀಡಾಕೂಟದಲ್ಲಿ ವಿಜಯನಗರ ಜಿಲ್ಲಾ ಕುಂಗ್–ಫು ವುಶು ಸಂಸ್ಥೆಯ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡಿದ್ದಾರೆ.

ಸಾನ್ ಶೌ ಮತ್ತು ತಾವುಲು ವಿಭಾಗದಲ್ಲಿ 16 ಕ್ರೀಡಾಪಟುಗಳು ಭಾಗವಹಿಸಿ 12 ಪದಕ ಗೆದ್ದು ಗಮನ ಸೆಳೆದಿದ್ದಾರೆ.

ತಾವುಲು ವಿಭಾಗ:

ಎಸ್.ಅಂಕಿತ – ಚಿನ್ನದ ಪದಕ, ಸಿ.ಆರ್.ವಿಜಯಕುಮಾರ್ – ಬೆಳ್ಳಿ, ಲಿಖಿತ – ಬೆಳ್ಳಿ, ಆರ್.ಯೋಗೇಶ್ – ಕಂಚು, ಮಂಜುಳಾ – ಕಂಚು, ಎನ್.ಚರಣ್ – ಕಂಚು

ಸಾನ್ ಶೌ ವಿಭಾಗ:

ಸುಹಾನ – ಚಿನ್ನ, ತನಿಷಾ – ಕಂಚು, ಗಣೇಶ್ – ಕಂಚು, ರಂಜಿತ್ – ಕಂಚು, ಶಶಾಂಕ್ – ಕಂಚು, ಉಮರ್ ಫಾರೂಕ್ – ಕಂಚು

ಪ್ರಿಯತಮ್, ಫಾರಿಯಾ, ಅರುಣ್, ಅಜಯ್ ಉತ್ತಮ ಪ್ರದರ್ಶನ ನೀಡಿ ಪ್ರಮಾಣ ಪತ್ರ ಪಡೆದರು. ಟೀಮ್ ಕೋಚ್ ಅಖಿಲ್ ಎಸ್. ಮತ್ತು ಟೀಂ ಮ್ಯಾನೇಜರ್ ಅಜಿತ್ ಭಾಗವಹಿಸಿದ್ದರು.

ಜಿಲ್ಲೆಗೆ ಕೀರ್ತಿ ತಂದ ಕ್ರೀಡಾಪಟುಗಳಿಗೆ ಉತ್ತಮ ಭವಿಷ್ಯ ಸಿಗಲಿ ಎಂದು ಹಾರೈಸುತ್ತೇನೆ. ಜಿಲ್ಲಾಧಿಕಾರಿಗಳು, ಕ್ರೀಡಾ ಇಲಾಖೆ ಮತ್ತು ಶಾಸಕರು ಕ್ರೀಡಾಪಟುಗಳ ಬಗ್ಗೆ ಗಮನ ಹರಿಸಬೇಕು ಎಂದು ಕುಂಗ್–ಫು ವುಶು ಸಂಸ್ಥೆ ಪ್ರಧಾನ ಕಾರ್ಯದರ್ಶಿ, ರಾಷ್ಟ್ರಮಟ್ಟದ ನಿರ್ಣಾಯಕ ಮತ್ತು ತರಬೇತುದಾರ ಎಸ್.ತಿಪ್ಪೇಸ್ವಾಮಿ ತಿಳಿಸಿದ್ದಾರೆ.



Hosapete Dhwani Kannada Daily Editor, Printer, Publisher & Owned By K. Prakash Kakubalu, 120, 1ST Ward, Kakubal Post Hospet, Ballary, Dist : Vijayanagara Karnataka State,
Printed at Dwaraka Printers & Publishers, Plot No. 12, Opp. Govt. Girls Hostel, GaneshaNagara Koppal-583231 Koppal District, Karnataka State,
e-mail : hosapetedhwani32026@gmail.com, Cell : 9342568684